ಸಂಪುಟ : 11 ಸಂಚಿಕೆ: 60 ಪುಟ : 4+2 ಬೆಲೆ: 3.00 ಶನಿವಾರ ಎಪ್ರಿಲ್ 04 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 60 Pages : 4+2 Price : 3.00 Saturday April 04 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನಾಳೆ ಡಾ. ಬಾಬು ಜಗಜೀವನರಾಮ್ 119ನೇ ಜಯಂತಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನರಾಮ್ ಅವರ 119ನೇ ಜನ್ಮದಿನಾಚರಣೆಯನ್ನು ಎಪ್ರಿಲ್ 5ರಂದು ಬೆಳಿಗ್ಗೆ 10.30 ಗಂಟೆಗೆ ಗದಗ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಜಯಂತಿ ಕಾರ್ಯಕ್ರಮಕ್ಕೆ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು, ಗದಗ ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿಗಳು, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ, ಅಲ್ಪಸಂಖ್ಯಾತ ವರ್ಗಗಳ ಸಂಘಟನೆಗಳ ಅಧ್ಯಕ್ಷರು, ಉಪಾಧ್ಯಕ್ಷರು, ಚುನಾಯಿತ ಸದಸ್ಯರು ಹಾಗೂ ಸಮಾಜದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಡಾ. ನಂದಾ ಹಣಬರಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಸ್ತ್ರಚಿಕಿತ್ಸೆ ಸಹಾಯಧನಕ್ಕೆ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**


ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ರೋಣ ಪುರಸಭೆ ವ್ಯಾಪ್ತಿಯಲ್ಲಿ ಬರುವ ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಶಸ್ತ್ರಚಿಕಿತ್ಸೆ ಸಹಾಯಧನಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿದಾರರು ಅರ್ಜಿಯೊಂದಿಗೆ ರೇಷನ್ ಕಾರ್ಡ್, ಆಧಾರ್ ಕಾರ್ಡ್, ಜಾತಿ ಪ್ರಮಾಣಪತ್ರ ಹಾಗೂ ಶಸ್ತ್ರಚಿಕಿತ್ಸೆಗೆ ಸಂಬಂಧಿಸಿದ ಸಂಪೂರ್ಣ ಬಿಲ್ಲುಗಳ ದಾಖಲಾತಿಗಳನ್ನು ಸಂಯೋಜಿಸಿ, 7 ದಿನಗಳೊಳಗಾಗಿ ರೋಣ ಪುರಸಭೆ ಕಾರ್ಯಾಲಯಕ್ಕೆ ಸಲ್ಲಿಸಬೇಕು ಎಂದು ರೋಣ ಪುರಸಭೆ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 100ಕ್ಕೂ ಹೆಚ್ಚು ಕಂಪನಿಗಳ ಭಾಗಿ; ಕಾರ್ಮಿಕ ಮಕ್ಕಳ ವಸತಿ ನಿಲಯ, ತಿಮ್ಮಕ್ಕ ವೃಕ್ಷೋದ್ಯಾನವನ ಉದ್ಘಾಟನೆ

# ಎ. 9ರಿಂದ ಬೃಹತ್ ಉದ್ಯೋಗ ಮೇಳ





> "ಯುವಕರು ಉದ್ಯೋಗ ಮೇಳದ ಅವಕಾಶವನ್ನು ಬಳಸಿಕೊಂಡು ಸ್ವಾವಲಂಭಿ ಜೀವನ ಕಟ್ಟಿಕೊಳ್ಳಬೇಕು."
>
> – ಜಿ.ಎಸ್. ಪಾಟೀಲ, ಶಾಸಕರು, ರೋಣ.

**■ವಿಜಯಸಾಕ್ಷಿ ಸುದ್ದಿ, ರೋಣ**

ರೋಣ ಪಟ್ಟಣದಲ್ಲಿ ಎಪ್ರಿಲ್ 9 ಮತ್ತು 10 ರಂದು ಬೃಹತ್ ಉದ್ಯೋಗ ಮೇಳ ಹಮ್ಮಿಕೊಳ್ಳಲಾಗಿದ್ದು, ಕ್ಷೇತ್ರದ ನಿರುದ್ಯೋಗ ಯುವಕ-ಯುವತಿಯರು ಇದರ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ರಾಜ್ಯ ಖನಿಜ ನಿಗಮದ ಅಧ್ಯಕ್ಷರು ಹಾಗೂ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ರಾಜೀವಗಾಂಧಿ ಶಿಕ್ಷಣ ಸಂಸ್ಥೆಯ ಸಭಾಂಗಣದಲ್ಲಿ ಅವರ 78ನೇ ಹುಟ್ಟುಹಬ್ಬದ ನಿಮಿತ್ತ ಅಭಿಮಾನಿ ಬಳಗ ಆಯೋಜಿಸಿದ್ದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಉದ್ಯೋಗಾವಕಾಶಗಳನ್ನು ಸ್ಥಳೀಯ ಮಟ್ಟದಲ್ಲೇ ಒದಗಿಸುವುದು ಈ ಮೇಳದ ಮುಖ್ಯ ಉದ್ದೇಶ ಎಂದು ತಿಳಿಸಿದರು.

ಎಪ್ರಿಲ್ 9 ರಂದು ಸ್ವಸಹಾಯ ಸಂಘಗಳ ಮಹಿಳೆಯರಿಗೆ ವಿಶೇಷ ಕಾರ್ಯಕ್ರಮ ಏರ್ಪಡಿಸಲಾಗಿದ್ದು, ತಾವು ತಯಾರಿಸಿದ ಉತ್ಪನ್ನಗಳನ್ನು ವಿವಿಧ ನಗರಗಳಲ್ಲಿ ಮಾರುಕಟ್ಟೆಗೊಳಿಸುವ ಕುರಿತು ಮಾರ್ಗದರ್ಶನ ನೀಡಲಾಗುತ್ತದೆ. ಈ ಕಾರ್ಯಕ್ರಮದಲ್ಲಿ ಸುಮಾರು 2100 ಸ್ವಸಹಾಯ ಗುಂಪುಗಳ 5 ಸಾವಿರಕ್ಕೂ ಹೆಚ್ಚು ಮಹಿಳಾ ಪ್ರತಿನಿಧಿಗಳು ಭಾಗವಹಿಸುವ ನಿರೀಕ್ಷೆಯಿದೆ. ಜೊತೆಗೆ, ಉತ್ಪನ್ನಗಳನ್ನು ಖರೀದಿಸುವ ಕಂಪನಿಗಳು ಸಹ ಮೇಳದಲ್ಲಿ ಭಾಗವಹಿಸಲಿವೆ.

ಎಪ್ರಿಲ್ 10 ರಂದು ನಡೆಯುವ ಉದ್ಯೋಗ ಮೇಳದಲ್ಲಿ 100ಕ್ಕೂ ಹೆಚ್ಚು ಪ್ರತಿಷ್ಠಿತ ಕಂಪನಿಗಳು ಭಾಗವಹಿಸಲಿದ್ದು, 10ನೇ ತರಗತಿ ಮತ್ತು ಅದರ ಮೇಲಿನ ವಿದ್ಯಾರ್ಹತೆ ಹೊಂದಿರುವ ಯುವಕರು ಭಾಗವಹಿಸಬಹುದು. ಆಯ್ಕೆಯಾದ ಅಭ್ಯರ್ಥಿಗಳಿಗೆ ಸ್ಥಳದಲ್ಲಿಯೇ ನೇಮಕಾತಿ ಆದೇಶ ನೀಡುವ ವ್ಯವಸ್ಥೆಯೂ ಕಲ್ಪಿಸಲಾಗಿದೆ.

ಈ ಹಿಂದೆ 2016ರಲ್ಲಿ ನಡೆದ ಉದ್ಯೋಗ ಮೇಳದಲ್ಲಿ 2 ಸಾವಿರ ಮಂದಿಗೆ ಉದ್ಯೋಗ ಲಭಿಸಿದ್ದು, ಅವರಲ್ಲಿ 900 ಮಂದಿ ಉದ್ಯೋಗದಲ್ಲಿ ಮುಂದುವರಿದು ಜೀವನ ರೂಪಿಸಿಕೊಂಡಿದ್ದಾರೆ. ಈ ಬಾರಿ ಹೆಚ್ಚಿನ ಸಂಖ್ಯೆಯಲ್ಲಿ ಭ ಾ ಗ ವ ಹಿ ಸಿ ▶▶ 4ನೇ ಪುಟಕ್ಕೆ

## ನಾಳೆ ಜಿಲ್ಲಾ ಪ್ರಥಮ ಸಾಹಿತ್ಯ ಸಾಂಸ್ಕೃತಿಕ-ಶೈಕ್ಷಣಿಕ ಸಮಾವೇಶ

**■ವಿಜಯಸಾಕ್ಷಿ ಸುದ್ದಿ, ಗದಗ**

ಅಖಿಲ ಕರ್ನಾಟಕ ಸಾಂಸ್ಕೃತಿಕ ಪರಿಷತ್ (ರಿ), ಬೆಂಗಳೂರು ಜಿಲ್ಲಾ ಘಟಕ ಗದಗ ಇವರ ಆಶ್ರಯದಲ್ಲಿ ಎಪ್ರಿಲ್ 5ರಂದು ಸಂಜೆ 4.00 ಗಂಟೆಗೆ ಬೆಟಗೇರಿಯ ಡಾ. ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ನಂತರದ ವೃತ್ತಿಪರ ಬಾಲಕಿಯರ ವಿದ್ಯಾರ್ಥಿ ನಿಲಯದಲ್ಲಿ ಜಿಲ್ಲಾ ಮಟ್ಟದ ಪ್ರಥಮ ಸಾಹಿತ್ಯ, ಸಾಂಸ್ಕೃತಿಕ ಹಾಗೂ ಶೈಕ್ಷಣಿಕ ಸಮಾವೇಶವನ್ನು ಆಯೋಜಿಸಲಾಗಿದೆ.


ಈ ಕಾರ್ಯಕ್ರಮದಲ್ಲಿ ಜ್ಞಾನಯೋಗಿ ವಿಶ್ವಸಂತ ಶ್ರೀ ಸಿದ್ದೇಶ್ವರ ಸ್ವಾಮೀಜಿಗಳಿಗೆ ನುಡಿನಮನ, ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ, ರಾಜ್ಯಮಟ್ಟದ ಪ್ರಶಸ್ತಿ ಪ್ರದಾನ, "ಭಾವ ಬಿಂದು ಕಾವ್ಯ ಸಿಂಧು" ಕವನ ಸಂಕಲನ ಲೋಕಾರ್ಪಣೆ ಹಾಗೂ ಜಿಲ್ಲಾ ಮಟ್ಟದ ಕವಿಗೋಷ್ಠಿ ನಡೆಯಲಿವೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಸಚಿವರಾದ ಡಾ. ಎಚ್.ಕೆ. ಪಾಟೀಲ ನೆರವೇರಿಸಲಿದ್ದು, ಪ್ರೊ. ಎಸ್.ವಿ. ಸಂಕನೂರ ಅವರು ಕೃತಿ ಲೋಕಾರ್ಪಣೆ ಮಾಡಲಿದ್ದಾರೆ. ರಾಜ್ಯಾಧ್ಯಕ್ಷ ಮನೋಹರ ನಾಯಕ ಅವರು ವಿವಿಧ ಕ್ಷೇತ್ರಗಳಲ್ಲಿ ಸಾಧಕರಿಗೆ ಪ್ರಶಸ್ತಿ ಪ್ರಧಾನ ಮಾಡಲಿದ್ದಾರೆ. ಪ್ರೊ. ಜಿ.ಎಫ್. ಕಾಯಕದ ಅವರು ಮಹಿಳಾ ಆತ್ಮಸ್ಥೈರ್ಯದ ಕುರಿತು ಉಪನ್ಯಾಸ ನೀಡಲಿದ್ದಾರೆ.

ಈ ಸಂದರ್ಭದಲ್ಲಿ ವಿವಿಧ ಗಣ್ಯರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದು, ಮಹಿಳಾ ಸಾಧಕರಿಗೆ "ಮಹಿಳಾ ಸಾಧಕರ ರತ್ನ ಪ್ರಶಸ್ತಿ" ಹಾಗೂ ಇತರರಿಗೆ "ಸಾಂಸ್ಕೃತಿಕ ಸಿರಿ ಪ್ರಶಸ್ತಿ" ನೀಡಿ ಗೌರವಿಸಲಾಗುವುದು ಎಂದು ಆಯೋಜಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಿಸಿಟಿವಿಯಲ್ಲಿ ಐದು ಮಂದಿ ಗ್ಯಾಂಗ್ ದೃಶ್ಯ ಸೆರೆ – ಜನರಲ್ಲಿ ಭೀತಿ!

# ಗದಗ-ಬೆಟಗೇರಿ ಅವಳಿ ನಗರದಲ್ಲಿ ಮುಸುಕುದಾರಿ ಗ್ಯಾಂಗ್ ಹಾವಳಿ!




> "ರಾತ್ರಿ ಸಮಯದಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ. ಕೂಡಲೇ ಕಳ್ಳರನ್ನು ಬಂಧಿಸಿ ಭದ್ರತೆ ಒದಗಿಸಬೇಕು."
>
> – ಪುಟ್ಟರಾಜ ನಿವಾಸಿಗಳು.



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದಲ್ಲಿ ಮುಸುಕುದಾರಿ ಕಳ್ಳರ ಗ್ಯಾಂಗ್ ಹಾವಳಿ ಹೆಚ್ಚಾಗಿದ್ದು, ಕಳೆದ ಒಂದು ವಾರದಿಂದ ನಿರಂತರ ಕಳ್ಳತನ ಹಾಗೂ ಕಳ್ಳತನ ಯತ್ನಗಳು ನಡೆಯುತ್ತಿರುವುದು ಸಾರ್ವಜನಿಕರಲ್ಲಿ ಆತಂಕಕ್ಕೆ ಕಾರಣವಾಗಿದೆ.

ಮುಖಕ್ಕೆ ಮುಸುಕು ಹಾಕಿಕೊಂಡು, ಕೈಯಲ್ಲಿ ಮಾರಕಾಸ್ತ್ರಗಳನ್ನು ಹಿಡಿದ ಐದು ಮಂದಿಯ ಗ್ಯಾಂಗ್ ರಾತ್ರಿ ವೇಳೆಯಲ್ಲಿ ಓಡಾಡುತ್ತಿರುವ ದೃಶ್ಯಗಳು ಸಿಸಿಟಿವಿಯಲ್ಲಿ ಸೆರೆಯಾಗಿವೆ. ಈ ಗ್ಯಾಂಗ್ ಬೀಗ ಹಾಕಿದ ಮನೆಗಳನ್ನು ಗುರಿಯಾಗಿಸಿಕೊಂಡು ಕಳ್ಳತನ ನಡೆಸುತ್ತಿದೆ ಎಂದು ತಿಳಿದು ಬಂದಿದೆ.

ಗದಗ ನಗರದ ಕೇಶವ ಪಾರ್ಕ್ ಹಾಗೂ ಪುಟ್ಟರಾಜ ನಗರ ಬಡಾವಣೆಗಳಲ್ಲಿ ಕಳ್ಳತನ ಮತ್ತು ಕಳ್ಳತನ ಯತ್ನಗಳು ನಡೆದಿವೆ. ಪುಟ್ಟರಾಜ ಬಡಾವಣೆಯ ಶಿಕ್ಷಕಿ ವಿಜಯಲಕ್ಷ್ಮಿ ಅವರ ಮನೆಯಲ್ಲಿ ಕಳ್ಳರು ಕನ್ನ ಹಾಕಿ, ಮನೆಯ ಮುಂಭಾಗದ ಬಾಗಿಲಿನ ಲಾಕ್ ಮುರಿದು ಒಳನುಗ್ಗಿದ್ದಾರೆ. ಮನೆಯವರು ಸಂಬಂಧಿಕರ ಮನೆಯಲ್ಲಿ ಕಾರ್ಯಕ್ರಮಕ್ಕೆ ಹೋಗಿದ್ದ ವೇಳೆ ಈ ಘಟನೆ ನಡೆದಿದೆ.

ಕಳ್ಳರು ಸುಮಾರು 70 ಗ್ರಾಂ ಚಿನ್ನ, 250 ಗ್ರಾಂ ಬೆಳ್ಳಿ ಆಭರಣಗಳು ಹಾಗೂ ನಗದು ಹಣವನ್ನು ಕಳವು ಮಾಡಿಕೊಂಡು ಪರಾರಿಯಾಗಿದ್ದಾರೆ. ಘಟನೆ ಸಂಬಂಧ ಬೆಟಗೇರಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದು, ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಇನ್ನೂ, ಕಳೆದ ಒಂದು ವಾರದಿಂದ ಇದೇ ಪ್ರದೇಶದಲ್ಲಿ ಹಲವು ಮನೆಗಳಲ್ಲಿ ಕಳ್ಳತನ ಮತ್ತು ಯತ್ನ ಪ್ರಕರಣಗಳು ವರದಿಯಾಗಿವೆ. ಎರಡು ಬಡಾವಣೆಗಳಲ್ಲಿ ಕಳ್ಳರು ಸಂಚರಿಸಿದ ದೃಶ್ಯಗಳು ಸಿಸಿಟಿವಿಯಲ್ಲಿ ದಾಖಲಾಗಿರುವುದು ಆತಂಕ ಹೆಚ್ಚಿಸಿದೆ.

ಪೊಲೀಸರು ಸ್ಥಳೀಯರಿಗೆ ಮನೆಗಳ ಬಳಿ ಸಿಸಿಟಿವಿ ಅಳವಡಿಸಲು ಸೂಚನೆ ನೀಡಿದ್ದು, ಹಲವರು ಈಗಾಗಲೇ ಕ್ಯಾಮೆರಾಗಳನ್ನು ಅಳವಡಿಸುತ್ತಿದ್ದಾರೆ. ಆದರೂ ಕಳ್ಳರ ಹಾವಳಿ ಕಡಿಮೆಯಾಗಿಲ್ಲ. ರಾತ್ರಿಯಾದರೆ ಸಾಕು ಜನರು ಭಯಭೀತರಾಗಿ ಬದುಕುವ ಪರಿಸ್ಥಿತಿ ನಿರ್ಮಾಣವಾಗಿದೆ. ಹೀಗಾಗಿ, ಕೂಡಲೇ ಆರೋಪಿಗಳನ್ನು ಪತ್ತೆ ಮಾಡಿ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ಭದ್ರತೆ ಬಿಗಿಗೊಳಿಸಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ. ಪೊಲೀಸರು ಕಠಿಣ ಕ್ರಮ ಕೈಗೊಂಡಾಗ ಮಾತ್ರ ಜನರಿಗೆ ನೆಮ್ಮದಿ ಸಿಗಲಿದೆ ಎಂಬುದು ಸಾರ್ವಜನಿಕರ ಅಭಿಪ್ರಾಯವಾಗಿದೆ.

### ಸ್ವಯಂ-ಗಣತಿ ವ್ಯವಸ್ಥೆ ಜಾರಿಗೆ; ನಾಗರಿಕರಿಗೆ ಆನ್‌ಲೈನ್ ಮೂಲಕ ಮಾಹಿತಿ ದಾಖಲಿಸಲು ಅವಕಾಶ- ಜೋಶಿ

## ಸ್ವಯಂ-ಗಣತಿಯಲ್ಲಿ ಎಲ್ಲರೂ ಸಕ್ರಿಯವಾಗಿ ಭಾಗವಹಿಸಿ

**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ದೇಶದ ಸಮಗ್ರ ಅಭಿವೃದ್ಧಿ ಮತ್ತು ಭವಿಷ್ಯದ ಯೋಜನೆಗಳಿಗೆ ಪ್ರಮುಖ ಆಧಾರವಾಗಿರುವ ಜನಗಣತಿ ಪ್ರಕ್ರಿಯೆಗೆ ಈ ಬಾರಿ ಡಿಜಿಟಲ್ ಸ್ಪರ್ಶ ನೀಡಲಾಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ.



2027ರ ಜನಗಣತಿ ಹಿನ್ನಲೆಯಲ್ಲಿ 'ಸ್ವಯಂ-ಗಣತಿ' (Self Enumeration) ಎಂಬ ನೂತನ ವ್ಯವಸ್ಥೆಯನ್ನು ಕೇಂದ್ರ ಸರ್ಕಾರ ಪರಿಚಯಿಸಿದ್ದು, ನಾಗರಿಕರು ತಮ್ಮ ಮನೆ ಹಾಗೂ ಕುಟುಂಬದ ವಿವರಗಳನ್ನು ಸ್ವತಃ ಆನ್‌ಲೈನ್ ಮೂಲಕ ದಾಖಲಿಸುವ ಅವಕಾಶ ನೀಡಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

"ನಾನು ಸ್ವತಃ ಆನ್‌ಲೈನ್ ಮೂಲಕ ನನ್ನ ಮತ್ತು ನನ್ನ ಕುಟುಂಬದ ವಿವರಗಳನ್ನು ಸುಲಭವಾಗಿ ಹಾಗೂ ಸುರಕ್ಷಿತವಾಗಿ ದಾಖಲಿಸಿದ್ದೇನೆ. ಇದು ಕೇವಲ ಅಂಕಿ-ಅಂಶಗಳ ಸಂಗ್ರಹವಲ್ಲ, ದೇಶದ ಪ್ರಗತಿಗೆ ಪ್ರತಿಯೊಬ್ಬ ನಾಗರಿಕನ ಕೊಡುಗೆ" ಎಂದು ಜೋಶಿ ಹೇಳಿದ್ದಾರೆ.

ಕರ್ನಾಟಕದಲ್ಲಿ ಈ ಡಿಜಿಟಲ್ ಸೌಲಭ್ಯವು ಎಪ್ರಿಲ್ 1ರಿಂದ ಎಪ್ರಿಲ್ 15, 2026ರವರೆಗೆ ಲಭ್ಯವಿದ್ದು, ನಾಗರಿಕರು census.gov.in ಪೋರ್ಟಲ್‌ಗೆ ಭೇಟಿ ನೀಡಿ ಮೊಬೈಲ್ OTP ಮೂಲಕ ಲಾಗಿನ್ ಆಗಿ ತಮ್ಮ ಮಾಹಿತಿಯನ್ನು ದಾಖಲಿಸಬಹುದು. ಪ್ರಕ್ರಿಯೆ ಸರಳವಾಗಿದ್ದು, ಮನೆ ಮತ್ತು ಕುಟುಂಬದ ಮೂಲಭೂತ ವಿವರಗಳನ್ನು ನಿಖರವಾಗಿ ನಮೂದಿಸಬೇಕು.

ದಾಖಲೆ ಪೂರ್ಣಗೊಂಡ ನಂತರ ದೊರೆಯುವ ಖಖಓ (Self Enumeration Reference Number) ಐಡಿಯನ್ನು ಸುರಕ್ಷಿತವಾಗಿ ಇಟ್ಟುಕೊಳ್ಳುವುದು ಅಗತ್ಯ. ನಂತರ ಗಣತಿದಾರರು ಮನೆಗೆ ಭೇಟಿ ನೀಡಿದಾಗ ಈ SRN ಐಡಿ ನೀಡುವುದರಿಂದ ಮಾಹಿತಿ ತ್ವರಿತವಾಗಿ ದೃಢೀಕರಿಸಲು ಸಾಧ್ಯವಾಗುತ್ತದೆ.

ಇದರಿಂದ ಸಮಯ ಉಳಿತಾಯವಾಗುವುದರ ಜೊತೆಗೆ ನಿಖರ ಮಾಹಿತಿಯ ಸಂಗ್ರಹಣೆಗೆ ಸಹಕಾರಿಯಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

ಇದು ದೇಶದ ಪ್ರಗತಿಗೆ ಪ್ರತಿಯೊಬ್ಬ ನಾಗರಿಕನ ನೇರ ಪಾಲ್ಗೊಳ್ಳುವಿಕೆಯಾಗಿದೆ. ಹೀಗಾಗಿ ಎಲ್ಲರೂ ಜವಾಬ್ದಾರಿಯುತ ನಾಗರಿಕರಾಗಿ ಈ ರಾಷ್ಟ್ರೀಯ ಅಭಿಯಾನದಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು ಎಂದು ಜೋಶಿ ಕರೆ ನೀಡಿದ್ದಾರೆ.

"'ನನ್ನ ಗಣತಿ – ದೇಶದ ಶಕ್ತಿ' ಎಂಬ ಧ್ಯೇಯದೊಂದಿಗೆ ಎಲ್ಲರೂ ಇಂದೇ ತಮ್ಮ ವಿವರಗಳನ್ನು ಆನ್‌ಲೈನ್‌ನಲ್ಲಿ ದಾಖಲಿಸಿ, ಸುಭದ್ರ ಹಾಗೂ ಸಮೃದ್ಧ ಭಾರತದ ನಿರ್ಮಾಣಕ್ಕೆ ಕೈಜೋಡಿಸೋಣ" ಎಂದು ಅವರು ಮನವಿ ಮಾಡಿದ್ದಾರೆ.

### ಬಿಜೆಪಿ ಪ್ರಶಿಕ್ಷಣ ವರ್ಗಕ್ಕೆ ಶಾಸಕ ಡಾ. ಚಂದ್ರು ಲಮಾಣಿ ಚಾಲನೆ

# ಕಾರ್ಯಕರ್ತರಲ್ಲಿ ಸೈದ್ಧಾಂತಿಕ ಸ್ಪಷ್ಟತೆ ಹೆಚ್ಚಿಸಿ




> "ಪಕ್ಷದ ಕಾರ್ಯಕರ್ತರು ಸರ್ಕಾರದ ಯೋಜನೆಗಳನ್ನು ಮನೆಮನೆಗೆ ತಲುಪಿಸುವುದು ಮುಖ್ಯ ಜವಾಬ್ದಾರಿ."
>
> – ಡಾ. ಚಂದ್ರು ಲಮಾಣಿ, ಶಾಸಕ. ಶಿರಹಟ್ಟಿ.

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಜಗದ್ಗುರು ವೀರಗಂಗಾಧರ ಕಲ್ಯಾಣ ಮಂಟಪದಲ್ಲಿ ಶಿರಹಟ್ಟಿ ಬಿಜೆಪಿ ಮಂಡಳದ ವತಿಯಿಂದ ಎರಡು ದಿನಗಳ ಕಾಲ ನಡೆಯುವ ಪಂಡಿತ ದೀನದಯಾಳ ಉಪಾಧ್ಯಾಯ ಪ್ರಶಿಕ್ಷಣ ಮಹಾಭಿಯಾನ-2026 ಕಾರ್ಯಕ್ರಮಕ್ಕೆ ಶಾಸಕ ಡಾ. ಚಂದ್ರು ಲಮಾಣಿ ಚಾಲನೆ ನೀಡಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪ್ರಶಿಕ್ಷಣ ವರ್ಗಗಳು ಪಕ್ಷದ ಕಾರ್ಯಕರ್ತರಲ್ಲಿ ಸೈದ್ಧಾಂತಿಕ ಸ್ಪಷ್ಟತೆ ಮೂಡಿಸುವುದರ ಜೊತೆಗೆ ಕೇಂದ್ರ ಸರ್ಕಾರದ ಸಾಧನೆಗಳನ್ನು ಜನರಿಗೆ ತಲುಪಿಸುವ ಪ್ರಮುಖ ವೇದಿಕೆಯಾಗಿದೆ ಎಂದು ಹೇಳಿದರು. ವಿವಿಧ ಜನಪರ ಯೋಜನೆಗಳನ್ನು ಗ್ರಾಮ ಮಟ್ಟದವರೆಗೆ ತಲುಪಿಸುವ ಜವಾಬ್ದಾರಿ ಕಾರ್ಯಕರ್ತರ ಮೇಲಿದೆ ಎಂದು ತಿಳಿಸಿದರು.

ಕೇಂದ್ರ ಸರ್ಕಾರ ಜಲ ಜೀವನ ಮಿಷನ್, ಆಯುಷ್ಮಾನ್ ಭಾರತ್ ಯೋಜನೆ, ಪ್ರಧಾನಮಂತ್ರಿ ಸುರಕ್ಷಿತ ಮಾತೃತ್ವ ಯೋಜನೆ ಸೇರಿದಂತೆ ಅನೇಕ ಕಲ್ಯಾಣ ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ. ಅಸಂಘಟಿತ ವಲಯದ ಕಾರ್ಮಿಕರಿಗೆ ಪಿಂಚಣಿ, ಕಡಿಮೆ ವೆಚ್ಚದ ಜೀವ ವಿಮೆ, ಹಾಗೂ ಪ್ರಧಾನಮಂತ್ರಿ ಅವಾಸ್ ಯೋಜನೆಯಡಿ ಲಕ್ಷಾಂತರ ಮನೆಗಳ ನಿರ್ಮಾಣ ಸೇರಿದಂತೆ ಹಲವು ಯೋಜನೆಗಳು ಜನಜೀವನ ಸುಧಾರಣೆಗೆ ಕಾರಣವಾಗಿವೆ ಎಂದು ವಿವರಿಸಿದರು.

ಬಿಜೆಪಿ ರಾಜ್ಯ ರೈತ ಮೋರ್ಚಾ ಕಾರ್ಯದರ್ಶಿ ಬಸವರಾಜ ಕುಂದಗೋಳಮಠ ಮಾತನಾಡಿ, ಕಾರ್ಯಕರ್ತರು ಸಂಘಟನಾ ಬಲವರ್ಧನೆಗೆ ಒತ್ತು ನೀಡಿ ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ಹೇಳಿದರು. ಭೂತ ನಿರ್ವಹಣೆಯನ್ನು ಅಚ್ಚುಕಟ್ಟಾಗಿ ನಡೆಸಿ ಪಕ್ಷವನ್ನು ಬಲಪಡಿಸುವ ಕಾರ್ಯ ಮಾಡಬೇಕು ಎಂದು ಕರೆ ನೀಡಿದರು. ಶಿರಹಟ್ಟಿ ಮಂಡಳದ ಬಿಜೆಪಿ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ ಪ್ರಾಸ್ತಾವಿಕವಾಗಿ ಮಾತನಾಡಿ, ಇಂತಹ ಪ್ರಶಿಕ್ಷಣ ವರ್ಗಗಳು ಪಕ್ಷದ ತತ್ವ-ಸಿದ್ಧಾಂತಗಳನ್ನು ಕಾರ್ಯಕರ್ತರಿಗೆ ತಿಳಿಸುವಲ್ಲಿ ಸಹಕಾರಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಪಂ ಮಾಜಿ ಸದಸ್ಯ ಎಂ.ಎಸ್. ದೊಡ್ಡಗೌಡ್ರ, ವಿಜಯಕುಮಾರ ಹತ್ತಿಕಾಳ, ಸೋಮೇಶ ಉಪನಾಳ, ನಿಂಗಪ್ಪ ಬನ್ನಿ, ಬಸವರಾಜ ಇಟಗಿ, ಸಂಗಮೇಶ ಬೆಳವಲಕೊಪ್ಪ, ಅಶೋಕ ಶಿರಹಟ್ಟಿ, ಭೀಮಣ್ಣ ಯಂಗಾಡಿ, ಬಸವರಾಜ ಚಕ್ರಸಾಲಿ, ನವೀನ್ ಹಿರೇಮಠ, ವಿಜಯ ಮೆಕ್ಕಿ, ಸಂತೋಷ ಜಾವೂರ, ಗಿರೀಶ ಚೌರಡ್ಡಿ, ಪ್ರವೀಣ ಬೋಮಲೆ, ವಿಜಯ ಕುಂಬಾರ, ಎನ್.ಬಿ. ಮಡಿವಾಳರ, ರವಿ ಕೋರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಗಂಗಾಧರ ಮೆಣಸಿನಕಾಯಿ, ಅನಿಲ್ ಮುಳಗುಂದ ಹಾಗೂ ರೋಹನ್ ಕುಂದನಹಳ್ಳಿ ಕಾರ್ಯಕ್ರಮ ನಿರ್ವಹಿಸಿದರು.

# ಕಾರ್ಯಕಾರಿ ಸಮಿತಿಗೆ ಬಾರಿಕರ ಸುಭಾಷ್ ಮುತ್ತೂರ್ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಉಡುಪಿಯ ದುರ್ಗಾ ಇಂಟರನ್ಯಾಷನಲ್ ಹೋಟೆಲ್‌ನಲ್ಲಿ ಇತ್ತೀಚೆಗೆ ರಾಜ್ಯ ಕರಾಟೆ ಶಿಕ್ಷಕರ ಸಂಘದ ಮಹಾಸಭೆ ಯಶಸ್ವಿಯಾಗಿ ನಡೆಯಿತು.

ಸಂಘದ ನಿಯಮಾವಳಿಗಳ ಪ್ರಕಾರ ನಡೆದ ಚುನಾವಣೆಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳ ಕರಾಟೆ ಶಿಕ್ಷಕರು ಹಾಗೂ ಪ್ರತಿನಿಧಿಗಳು ಸಕ್ರಿಯವಾಗಿ ಭಾಗವಹಿಸಿದ್ದರು.

ಈ ಮಹಾಸಭೆಯಲ್ಲಿ ಸಂಘದ ಹೊಸ ಕಾರ್ಯಕಾರಿ ಸಮಿತಿ ರಚನೆಯಾಗಿದ್ದು, ವಿಜಯನಗರ ಜಿಲ್ಲೆಯಿಂದ ಕರಾಟೆ ಮಾಸ್ಟರ್ ಶಿಹಾನ್ ಬಾರಿಕರ ಸುಭಾಷ್ ಮುತ್ತೂರ್ ಅವರನ್ನು ಕಾರ್ಯಕಾರಿ ಸಮಿತಿ ಸದಸ್ಯರಾಗಿ ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ಇದೇ ವೇಳೆ ಮಂಗಳೂರಿನ ಮಹಮ್ಮದ್ ನದೀಮ್ ಅವರನ್ನು ಸಂಘದ ಅಧ್ಯಕ್ಷರಾಗಿ ಹಾಗೂ ಬಳ್ಳಾರಿ ಜಿಲ್ಲೆಯ ಕಟ್ಟೇಸ್ವಾಮಿ ಅವರನ್ನು ಪ್ರಧಾನ ಕಾರ್ಯದರ್ಶಿಯಾಗಿ ಆಯ್ಕೆ ಮಾಡಲಾಯಿತು.

ಹೊಸದಾಗಿ ಆಯ್ಕೆಯಾದ ಪದಾಧಿಕಾರಿಗಳು ರಾಜ್ಯದ ಕರಾಟೆ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಬದ್ಧರಾಗಿದ್ದು, ತರಬೇತಿ ಗುಣಮಟ್ಟ ಹೆಚ್ಚಿಸುವುದು, ವಿದ್ಯಾರ್ಥಿಗಳಿಗೆ ಉತ್ತೇಜನ ನೀಡುವುದು ಹಾಗೂ ರಾಜ್ಯ ಮಟ್ಟದ ಕ್ರೀಡಾ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಆಯೋಜಿಸುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ವಿಜಯನಗರ ಜಿಲ್ಲೆಯ ಕರಾಟೆ ಮಾಸ್ಟರ್‌ಗಳಾದ ಡಾ. ದಾಸರ ನಾಗರಾಜ, ಹನುಮಂತ, ಆನಂದ, ಕೊಂಡಯ್ಯ ಸೇರಿದಂತೆ ಸಂಘದ ಹಿರಿಯರು ಹಾಗೂ ಸದಸ್ಯರು ನೂತನ ಪದಾಧಿಕಾರಿಗಳಿಗೆ ಅಭಿನಂದನೆ ಸಲ್ಲಿಸಿ, ಮುಂದಿನ ಕಾರ್ಯಚಟುವಟಿಕೆಗಳಿಗೆ ಶುಭಾಶಯ

# ಚೇಂಬರ್ ಆಫ್ ಕಾಮರ್ಸ್ ಪದಗ್ರಹಣ ಸಮಾರಂಭ; ಮೊದಲ ಹಂತದಲ್ಲಿ -50 ಲಕ್ಷ ಬಿಡುಗಡೆ

## ವ್ಯಾಪಾರಿ ಭವನಕ್ಕೆ 1 ಕೋಟಿ ಮಂಜೂರು: ಶಾಸಕ ಕೆ. ನೇಮಿರಾಜ್ ನಾಯ್ಕ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪಟ್ಟಣದ ವ್ಯಾಪಾರಸ್ಥರ ಸೌಕರ್ಯಕ್ಕಾಗಿ ಚೇಂಬರ್ ಆಫ್ ಕಾಮರ್ಸ್ ಬೇಡಿಕೆಯಂತೆ 1 ಕೋಟಿ ವೆಚ್ಚದಲ್ಲಿ ವ್ಯಾಪಾರಿ ಭವನ ನಿರ್ಮಾಣಕ್ಕೆ ಅನುಮೋದನೆ ನೀಡಲಾಗಿದ್ದು, ಮೊದಲ ಹಂತದಲ್ಲಿ 50 ಲಕ್ಷ ಮಂಜೂರು ಮಾಡಲಾಗುವುದು ಎಂದು ಶಾಸಕ ಕೆ. ನೇಮಿರಾಜ್ ನಾಯ್ಕ ಹೇಳಿದರು.

ಪಟ್ಟಣದ ಕನ್ಯಕಾ ಪರಮೇಶ್ವರಿ ಸಮುದಾಯ ಭವನದಲ್ಲಿ ಚೇಂಬರ್ ಆಫ್ ಕಾಮರ್ಸ್ ಮತ್ತು ಇಂಡಸ್ಟ್ರೀಸ್ ವತಿಯಿಂದ ಆಯೋಜಿಸಿದ್ದ ನೂತನ ಅಧ್ಯಕ್ಷರು ಹಾಗೂ ಪದಾಧಿಕಾರಿಗಳ ಪದಗ್ರಹಣ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಾರುಕಟ್ಟೆಯಲ್ಲಿ ದುಡಿಯುವ ಹಮಾಲರು ಸೇರಿದಂತೆ ಎಲ್ಲಾ ವರ್ಗದ ಕಾರ್ಮಿಕರ ಹಿತಾಸಕ್ತಿಗೆ ಆದ್ಯತೆ ನೀಡಬೇಕು. ಚೇಂಬರ್ ಆಫ್ ಕಾಮರ್ಸ್ ಸಂಘಟನೆ ದುಡಿಯುವ ವರ್ಗದ ಪರವಾಗಿ ಕಾರ್ಯನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಅಶ್ವಿನ್ ಕೊತ್ತಂಬರಿ ಮಾತನಾಡಿ, ಸಂಘಟನೆ ವ್ಯಾಪಾರಿಗಳ ಹಿತಾಸಕ್ತಿಗೆ ಬಳಸಿಕೊಳ್ಳಬೇಕು ಎಂದು ಅಭಿಪ್ರಾಯಪಟ್ಟರು.

> "ವ್ಯಾಪಾರಸ್ಥರ ಸೌಕರ್ಯಕ್ಕಾಗಿ ವ್ಯಾಪಾರಿ ಭವನ ನಿರ್ಮಾಣಕ್ಕೆ ಸರ್ಕಾರ ಬದ್ಧವಾಗಿದೆ."
> – ಕೆ. ನೇಮಿರಾಜ್ ನಾಯ್ಕ, ಶಾಸಕ.

### ನೂತನ ಅಧ್ಯಕ್ಷರ ಭರವಸೆ

ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷರಾಗಿ ಮರು ಆಯ್ಕೆಯಾದ ಬದಾಮಿ ಮೃತ್ಯುಂಜಯ (ಮುತ್ತಣ್ಣ) ಮಾತನಾಡಿ, ಸಂಘದ ಶ್ರೇಯೋಭಿವೃದ್ಧಿಗೆ ಹಾಗೂ ಎಲ್ಲಾ ಪದಾಧಿಕಾರಿಗಳ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಿ ವ್ಯಾಪಾರಿಗಳ ಹಿತಾಸಕ್ತಿಗಾಗಿ ಶ್ರಮಿಸುವುದಾಗಿ ತಿಳಿಸಿದ್ದಾರೆ.

ಚೇಂಬರ್ ಆಫ್ ಕಾಮರ್ಸ್‌ನ ಪದಾಧಿಕಾರಿಗಳು, ಹಿರಿಯ ವರ್ತಕರು ಹಾಗೂ ವಿವಿಧ ಭಾಗಗಳಿಂದ ಆಗಮಿಸಿದ್ದ ವ್ಯಾಪಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿ ಸಮಾರಂಭವನ್ನು ಯಶಸ್ವಿಗೊಳಿಸಿದರು.

ವೇದಿಕೆಯಲ್ಲಿ ಅಕ್ಕಿ ಶಿವಣ್ಣ, ಪಟ್ಟೇದ ಮಂಜುನಾಥ, ಬದಾಮಿ ಗುರುಬಸವರಾಜ, ಕಾಂತಿಲಾಲ್ ಜೈನ್, ದಿನೇಶ್ ದಾರಿವಾಲ್, ಪ್ರಕಾಶ್ ಗೌಡ, ಜಿ.ವಿ. ಸುದರ್ಶನ, ಎನ್. ವೆಂಕಣ್ಣ, ಚಿದ್ರಿ ವೈಭವ, ಬಾವಿ ಶಶಿಧರ, ಜಿ.ವಿ. ವಿಜೇತ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಬದಾಮಿ ಮೃತ್ಯುಂಜಯ ವಹಿಸಿದ್ದರು. ನಂದೀಪುರ ಕ್ಷೇತ್ರದ ಡಾ. ಮಹೇಶ್ವರ ಸ್ವಾಮಿಗಳು ಆಶೀರ್ವಚನ ನೀಡಿದರು. ಭಾರತಿ ನಾಗೇಂದ್ರ ಕುಮಾರ್ ಪ್ರಾರ್ಥನೆ ಹಾಡಿದ್ದು, ಬದಾಮಿ ಪ್ರಭುಲಿಂಗರಾಜು ನಿರೂಪಣೆ ಮತ್ತು ಸ್ವಾಗತ ನಿರ್ವಹಿಸಿದರು.

# ನೂತನ ಕರಿಬಸವೇಶ್ವರ ದೇವಸ್ಥಾನ ಉದ್ಘಾಟನೆ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಬಾಚಿಗೊಂಡನಹಳ್ಳಿ ಗ್ರಾಮದಲ್ಲಿ ನೂತನವಾಗಿ ನಿರ್ಮಾಣಗೊಂಡ ಶ್ರೀ ಕರಿಬಸವೇಶ್ವರ ದೇವಸ್ಥಾನವನ್ನು ಶಾಸಕ ಕೆ. ನೇಮಿರಾಜ ನಾಯ್ಕ ಅವರು ಭಕ್ತಿಭಾವದಿಂದ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ದೇವಾಲಯಗಳು ನಮ್ಮ ಸಂಸ್ಕೃತಿ ಮತ್ತು ಸಂಪ್ರದಾಯಗಳ ಪ್ರತಿಬಿಂಬವಾಗಿದ್ದು, ಗ್ರಾಮೀಣ ಸಮಾಜದಲ್ಲಿ ಐಕ್ಯತೆ ಮತ್ತು ಆತ್ಮೀಯತೆಯನ್ನು ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದು ಹೇಳಿದರು.

ಕರಿಬಸವೇಶ್ವರ ದೇವರ ಆಶೀರ್ವಾದದಿಂದ ಗ್ರಾಮಕ್ಕೆ ಶಾಂತಿ ಹಾಗೂ ಸಮೃದ್ಧಿ ನೆಲೆಸಲಿ ಎಂದು ಹಾರೈಸಿದರು.

ಉದ್ಘಾಟನೆಗೂ ಮೊದಲು ವಿಶೇಷ ಪೂಜೆ, ಹೋಮ-ಹವನ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನೆರವೇರಿದವು. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವರ ದರ್ಶನ ಪಡೆದುಕೊಂಡರು.

ನಂತರ ಶಾಸಕರು ಹಾಗೂ ಶ್ರೀಗಳು ಗ್ರಾಮದಲ್ಲಿ ನಡೆದ ಆಂಜನೇಯ ಸ್ವಾಮಿ ರಥೋತ್ಸವದ ಪ್ರಯುಕ್ತ ಸ್ವಾಮಿಯ ದರ್ಶನ ಪಡೆದರು.

ಈ ಸಂದರ್ಭದಲ್ಲಿ ಮೃತ್ಯುಂಜಯ (ಮುತ್ತಣ್ಣ) ಜೆಡಿಎಸ್ ಜಿಲ್ಲಾಧ್ಯಕ್ಷರು, ವಿಶ್ವಕರ್ಮ ಸಮಾಜದ ಅಧ್ಯಕ್ಷ ಸಿದ್ದರಾಜು, ಸ್ಥಳೀಯ ಮುಖಂಡರಾದ ಕೆ. ರೋಹಿತ್, ಕರಿಬಸವರಾಜ, ಮೋಹನ್, ದೊಡ್ಡಬಸಪ್ಪ, ಸಿದ್ದನಗೌಡ, ವೀರೇಶ್, ಉಪ್ಪಾರ್ ಪರಶುರಾಮ್, ಮಾನ್ಯಪುರ ಚನ್ನಬಸಪ್ಪ, ಲೆಕ್ಚರ್ ಚನ್ನಬಸಪ್ಪ ಸೇರಿದಂತೆ ಗ್ರಾಮಸ್ಥರು, ದೇವಸ್ಥಾನ ಸಮಿತಿ ಸದಸ್ಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಸಮಾರಂಭವು ಭಕ್ತಿಪೂರ್ಣ ವಾತಾವರಣದಲ್ಲಿ ಯಶಸ್ವಿಯಾಗಿ ನೆರವೇರಿತು.

### ಶ್ರೀಗಳ ಆಶೀರ್ವಚನ

ಶ್ರೀ ಶಿವಶಾಂತ ಮಹಾಸ್ವಾಮಿಗಳು, ಕೌದಿ ಮಹಾಂತೇಶ್ವರ ಶಾಖಾ ಮಠ, ಅವರು ಆಶೀರ್ವಚನ ನೀಡಿ, "ಕರಿಬಸವೇಶ್ವರ ದೇವಸ್ಥಾನ ನಿರ್ಮಾಣವು ಕೇವಲ ಕಟ್ಟಡವಲ್ಲ, ಅದು ಭಕ್ತರ ಭಾವನೆಗಳ ಪ್ರತಿರೂಪವಾಗಿದೆ. ಇಂತಹ ಧಾರ್ಮಿಕ ಕೇಂದ್ರಗಳು ಸಮಾಜದಲ್ಲಿ ಸತ್ಪ್ರವೃತ್ತಿ, ಶಾಂತಿ ಹಾಗೂ ಸಹೋದರತ್ವವನ್ನು ಬೆಳೆಸುತ್ತವೆ. ದೇವರ ಆಶೀರ್ವಾದದಿಂದ ಗ್ರಾಮದಲ್ಲಿ ಸುಖ-ಶಾಂತಿ ಹಾಗೂ ಸಮೃದ್ಧಿ ಹೆಚ್ಚಲಿ" ಎಂದು ಹೇಳಿದರು.

# ಹನುಮ ಜಯಂತಿ: ಸಾಮೂಹಿಕ 'ಗದಾ ಪೂಜೆ' ಆಚರಣೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇಂದು ವಿಶ್ವವು ಯುದ್ಧದ ಅನಿಶ್ಚಿತತೆಯ ನಡುವೆ ಸಂಕಷ್ಟದಲ್ಲಿರುವ ಸಂದರ್ಭದಲ್ಲಿ, ಯುವಕರು ವಿಜಯದ ಸಂಕಲ್ಪದೊಂದಿಗೆ ಹನುಮ ಜಯಂತಿಯಂದು ಹಿಂದೂ ಜನಜಾಗೃತಿ ಸಮಿತಿಯ ವತಿಯಿಂದ ಸಾಮೂಹಿಕ 'ಗದಾ ಪೂಜೆ' ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಇತಿಹಾಸದ ಅವಲೋಕನದಲ್ಲಿ, ಯಾವ ಯುದ್ಧಗಳಲ್ಲಿ ಹನುಮಂತನು ನೆಲೆಸಿದ್ದಾನೋ, ಅಲ್ಲಿ ವಿಜಯವು ನಿಶ್ಚಿತವಾಗಿದೆ ಎಂಬ ನಂಬಿಕೆಯಿದೆ. ಮುಂಬರುವ ಸವಾಲಿನ ಸಮಯದಲ್ಲಿ ಹನುಮಂತನ ಆಶೀರ್ವಾದದಿಂದ ಹಿಂದೂಗಳ ವಿಜಯ ಖಚಿತವಾಗಲಿ ಎಂಬ ಸಂಕಲ್ಪದೊಂದಿಗೆ ದೇಶಾದ್ಯಂತ 25 ಜಿಲ್ಲೆಗಳಲ್ಲಿ 850ಕ್ಕೂ ಹೆಚ್ಚು ಸ್ಥಳಗಳಲ್ಲಿ ಈ ಸಾಮೂಹಿಕ 'ಗದಾ ಪೂಜೆ' ನೆರವೇರಿಸಲಾಯಿತು.

ಕಾರ್ಯಕ್ರಮದಲ್ಲಿ 'ಗದಾ ಪೂಜೆ' ವಿಧಿ, ಶ್ರೀ ಹನುಮಂತನ ಆರತಿ, ಮಾರುತಿ ಸ್ತೋತ್ರ ಪಠಣ, ಶಂಖನಾದ ಹಾಗೂ ಸಾಮೂಹಿಕ ಪ್ರಾರ್ಥನೆ ನಡೆಯಿತು. ನಂತರ 'ಶ್ರೀ ಹನುಮತೇ ನಮಃ' ಎಂಬ ನಾಮಜಪ ಮಾಡಲಾಯಿತು.

ಈ ಸಂದರ್ಭದಲ್ಲಿ 'ರಾಮರಾಜ್ಯದ ಸ್ಥಾಪನೆಗಾಗಿ ಮಾರುತಿಯ ಗುಣಗಳನ್ನು ಹೇಗೆ ಅಳವಡಿಸಿಕೊಳ್ಳಬೇಕು' ಎಂಬ ವಿಷಯದ ಕುರಿತು ಮಾರ್ಗದರ್ಶನ ನೀಡಲಾಯಿತು. ಕಾರ್ಯಕ್ರಮದ ಅಂತ್ಯದಲ್ಲಿ 'ರಾಮರಾಜ್ಯದ ಸ್ಥಾಪನೆಗಾಗಿ ಸಾಮೂಹಿಕ ಪ್ರತಿಜ್ಞೆ' ಸ್ವೀಕರಿಸಲಾಯಿತು.

ಹಿಂದೂ ಜನಜಾಗೃತಿ ಸಮಿತಿಯು ಕಳೆದ ನಾಲ್ಕು ವರ್ಷಗಳಿಂದ ದೇಶಾದ್ಯಂತ ಈ ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸುತ್ತಿದ್ದು, ಈ ವರ್ಷವೂ ಗದಗ ಹಾಗೂ ಲಕ್ಷ್ಮೇಶ್ವರದ ಹಲವು ಹನುಮಂತ ದೇವಸ್ಥಾನಗಳಲ್ಲಿ ಗದಾ ಪೂಜೆ ನಡೆಯಿತು. ಕಾರ್ಯಕ್ರಮದಲ್ಲಿ ಹಿಂದುತ್ವನಿಷ್ಠರು, ಭಕ್ತರು ಹಾಗೂ ವಿವಿಧ ಸಂಘಟನೆಗಳ ಪ್ರತಿನಿಧಿಗಳು ಉತ್ಸಾಹಭರಿತವಾಗಿ ಭಾಗವಹಿಸಿದ್ದರು.



# ಪ್ರಾಥಮಿಕ ಹಂತದ ಶಿಕ್ಷಣವೇ ಮಕ್ಕಳ ಭವಿಷ್ಯದ ಆಧಾರ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಕೆಂಚಲಾಪುರ ಓಣಿಯಲ್ಲಿ ಶಿಥಿಲಗೊಂಡಿದ್ದ ಅಂಗನವಾಡಿ ಕೇಂದ್ರ ಸಂಖ್ಯೆ-246ನ್ನು ದುರಸ್ಥಿಗೊಳಿಸಿ ನೂತನವಾಗಿ ರೂಪುಗೊಂಡ ಕಟ್ಟಡವನ್ನು ಸಿಡಿಪಿಓ ಮೃತ್ಯುಂಜಯ ಗುಡ್ಡದಾನ್ವೇರಿ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪ್ರಾಥಮಿಕ ಹಂತದಲ್ಲಿ ಉತ್ತಮ ಶಿಕ್ಷಣ ದೊರೆತರೆ ಮಕ್ಕಳ ಬದುಕು ಹಾಗೂ ಭವಿಷ್ಯ ಉತ್ತಮವಾಗಿ ರೂಪುಗೊಳ್ಳುತ್ತದೆ. ಅಂಗನವಾಡಿ ಕೇಂದ್ರಗಳು ಈ ಮಹತ್ವದ ಕಾರ್ಯವನ್ನು ಸಮರ್ಥವಾಗಿ ನಿರ್ವಹಿಸುತ್ತಿವೆ ಎಂದು ಹೇಳಿದರು.

ಪಿಆರ್‌ಇಡಿ ಯೋಜನೆಯಡಿ ಅಂದಾಜು 2.50 ಲಕ್ಷ ರೂ. ವೆಚ್ಚದಲ್ಲಿ ಕಾಮಗಾರಿ ಕೈಗೊಂಡು ಅಂಗನವಾಡಿ ಕೇಂದ್ರಕ್ಕೆ ಹೊಸ ರೂಪ ನೀಡಲಾಗಿದೆ. ಪಾಲಕರು ತಮ್ಮ ಮಕ್ಕಳನ್ನು ಅಂಗನವಾಡಿ ಕೇಂದ್ರಗಳಿಗೆ ದಾಖಲಿಸಿ, ಇಲಾಖೆಯಿಂದ ದೊರೆಯುವ ಸೌಲಭ್ಯಗಳನ್ನು ಪಡೆಯಬೇಕು. ಇಂತಹ ಕೇಂದ್ರಗಳು ಮಕ್ಕಳ ಭವಿಷ್ಯ ರೂಪಿಸಲು ಭದ್ರ ಬುನಾದಿ ಹಾಕುತ್ತವೆ ಎಂದು ತಿಳಿಸಿದರು.

ಅಂಗನವಾಡಿ ಮೇಲ್ವಿಚಾರಕಿ ನಂದಾ ನವಲೆ ಮಾತನಾಡಿ, ಅಂಗನವಾಡಿ ಕೇಂದ್ರಗಳ ಸದುಪಯೋಗವನ್ನು ಮಕ್ಕಳು ಪಡೆದುಕೊಳ್ಳಬೇಕು. ಕಾರ್ಯಕರ್ತೆಯರು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವುದರಿಂದ ಕೇಂದ್ರಗಳು ಹೆಚ್ಚು ಕ್ರಿಯಾಶೀಲತೆಯಿಂದ ಕಾರ್ಯನಿರ್ವಹಿಸುತ್ತಿದ್ದು, ಮಕ್ಕಳಿಗೆ ಉತ್ತಮ ಪೋಷಣೆ ಹಾಗೂ ಆರೈಕೆ ಸಿಗುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ನಾಗರತ್ನಾ ಬುರಡಿ, ಹೇಮಣ್ಣ ಬುರಡಿ, ಗಿರಿಜವ್ವ ಅಂಬಲಿ, ಭಾಗ್ಯಶ್ರೀ ಎಲ್., ಮಂಜುಳಾ ಗುಂಜಳ, ಪ್ರಕಾಶ ಗುತ್ತಲ, ಈರಣ್ಣ ನಾಗಲೋಟಿ, ಪ್ರಬಣ್ಣ ಚಾವಡಿ, ಶಂಕ್ರಪ್ಪ ಬುರಡಿ, ಮಹಾಂತೇಶ ಜಾಲಗಾರ, ರವಿ ಗುಂಜಳ ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಯರಾದ ನಿರ್ಮಲಾ ಪಶುಪತಿಹಾಳ, ವಿಜಯಲಕ್ಷ್ಮಿ ನವಲಗುಂದ, ಬಾಳಮ್ಮ ಭಜಂತ್ರಿ ಹಾಗೂ ಸಹಾಯಕಿಯರಾದ ರಕ್ಷಿತಾ ಭಜಂತ್ರಿ, ಶೋಭಾ ಶಿರಹಟ್ಟಿ, ಪ್ರಮಿಳಾ ಬಾರಕೇರ ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ವೀಣಾ ಹಿತ್ತಲಮನಿ ನಿರ್ವಹಿಸಿದರು.

# ಹನುಮ ಜಯಂತಿ ಸಂಭ್ರಮ: ದೇವಸ್ಥಾನಗಳಲ್ಲಿ ವಿಶೇಷ ಪೂಜೆ, ತೊಟ್ಟಿಲೋತ್ಸವ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದವನದ ಹುಣ್ಣಿಮೆಯ ಅಂಗವಾಗಿ ಗುರುವಾರ ಹನುಮ ಜಯಂತಿ ಹಿನ್ನಲೆಯಲ್ಲಿ ಲಕ್ಷ್ಮೇಶ್ವರ ಪಟ್ಟಣ ಹಾಗೂ ತಾಲೂಕಿನ ವಿವಿಧ ಹನುಮಂತ ದೇವರ ದೇವಸ್ಥಾನಗಳಲ್ಲಿ ವಿಶೇಷ ಪೂಜೆ, ಅಲಂಕಾರ, ಅಭಿಷೇಕ, ತೊಟ್ಟಿಲೋತ್ಸವ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಶ್ರದ್ಧಾ-ಭಕ್ತಿಯಿಂದ ನೆರವೇರಿಸಲಾಯಿತು.


ಪಟ್ಟಣದ ಪೇಟೆ ಆಂಜನೇಯ ದೇವಸ್ಥಾನದಲ್ಲಿ ವಿಶೇಷ ಪೂಜೆಯೊಂದಿಗೆ ಅಲಂಕರಿಸಲಾದ ಬೆಳ್ಳಿಯ ತೊಟ್ಟಿಲಲ್ಲಿ ಹನುಮಂತ ದೇವರ ಉತ್ಸವ ಮೂರ್ತಿಯನ್ನು ಇರಿಸಿ ಮಹಿಳೆಯರು ಹಾಗೂ ಮಕ್ಕಳು ತೊಟ್ಟಿಲು ಪೂಜೆ ನೆರವೇರಿಸಿ ಜೋಗುಳ ಹಾಡಿದರು.

ಕಾರ್ಯಕ್ರಮದಲ್ಲಿ ಮಹಿಳಾ ರುದ್ರಬಳಗದ ಸದಸ್ಯರಾದ ಪರಮೇಶ್ವರಿ, ಪ್ರಭಾ ಪುರಾಣಿಕಮಠ, ಜ್ಯೋತಿ, ಜಯಶ್ರೀ, ಆರತಿ, ವಿಜಯಲಕ್ಷ್ಮಿ, ಅಮೃತಾ, ಬಾಳಿಹಳ್ಳಿಮಠ, ಪಾರ್ವತಿ ಕಳ್ಳಿಮಠ, ಶಾಂತಾ ಗುಳಗಣ್ಣವರ, ಗೌರಮ್ಮ ಮರಡೂರಮಠ, ವಿಜಯಲಕ್ಷ್ಮಿ ವಿರಕ್ತಮಠ ಅವರು ರುದ್ರಪಠಣ ನೆರವೇರಿಸಿದರು. ಮಾರುತಿ ಆಂಜನೇಯ ಭಜನಾ ಸಂಘದಿಂದ ಭಜನೆಗಳು ನಡೆದವು. ಕೃಷ್ಣ ಕ್ಷತ್ರಿ ಕುಟುಂಬದಿಂದ ಮಂಗಳವಾದ್ಯವೂ ಜರುಗಿತು.

ಈ ಸಂದರ್ಭದಲ್ಲಿ ಮಾತನಾಡಿದ, ಅರ್ಚಕರಾದ ಮುರಘೇಂದ್ರಸ್ವಾಮಿ ಹಿರೇಮಠ ಅವರು, "ಸೇವೆ, ತ್ಯಾಗ, ನಿಷ್ಠೆ ಮತ್ತು ಭಕ್ತಿಗೆ ಹನುಮಂತ ದೇವರು ಪ್ರತೀಕ. ಅಪಾರ ಶಕ್ತಿ ಹೊಂದಿದ್ದರೂ ವಿನಯಶೀಲತೆ ಮತ್ತು ಸದ್ಗುಣಗಳಿಂದ ಕೂಡಿದ ಹನುಮಂತನು ರಾಮಭಕ್ತಿಯಾಗಿ ಜಗತ್ತಿಗೆ ಆದರ್ಶನಾಗಿದ್ದಾನೆ. ಸಂಕಷ್ಟಹರನಾಗಿ ಭಕ್ತರ ಮನೋಸಂಕಲ್ಪಗಳನ್ನು ಈಡೇರಿಸುತ್ತಾನೆ. ಮಕ್ಕಳಲ್ಲಿ ಧಾರ್ಮಿಕ ಹಾಗೂ ನೈತಿಕ ಮೌಲ್ಯಗಳನ್ನು ಬೆಳೆಸುವುದು ಅಗತ್ಯ." ಎಂದರು.



# ಭಕ್ತ ಸಾಗರ ಮಧ್ಯೆ ಕೋಡಿಯಲ್ಲಮ್ಮ ದೇವಿ ಜಾತ್ರೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪುರಾತನ ಪ್ರಸಿದ್ಧ ಶ್ರೀ ಕೋಡಿಯಲ್ಲಮ್ಮ ದೇವಿಯ ಜಾತ್ರಾ ಮಹೋತ್ಸವವು ಸಂಪ್ರದಾಯಬದ್ಧವಾಗಿ ದವಣದ ಹುಣ್ಣಿಮೆಯಂದು ಅಪಾರ ಭಕ್ತರ ಭಾಗವಹಿಸುವಿಕೆಯಿಂದ ಭಕ್ತಿಭಾವದಿಂದ ನೆರವೇರಿತು.

ಸಂಪ್ರದಾಯದಂತೆ ಈ ವರ್ಷವೂ ಪಟ್ಟಣದ ಕಲಾವಿದ ಪ್ರವೀಣ ಗಾಯಕರ ಮನೆಯಲ್ಲಿ ದೇವಿಯ ಮೂರ್ತಿಗೆ ಬಣ್ಣ ಹಚ್ಚಿಸಿ, ಪಟ್ಟಣದ ಪ್ರಮುಖ ಮಾರ್ಗಗಳಲ್ಲಿ ಎತ್ತಿನ ಬಂಡಿಯಲ್ಲಿ ವಾದ್ಯಮೇಳ ಹಾಗೂ ಪೂರ್ಣಕುಂಭದೊಂದಿಗೆ ಮೆರವಣಿಗೆ ನಡೆಸಿ ದೇವಸ್ಥಾನಕ್ಕೆ ಬರಮಾಡಿಕೊಳ್ಳಲಾಯಿತು. ಮಾರ್ಗ ಮಧ್ಯದಲ್ಲಿ ಮುತ್ತೈದೆಯರು ಉಡಿ ತುಂಬುವ ಮೂಲಕ ಭಕ್ತಿ ಸಮರ್ಪಿಸಿದರು. ಈ ಸಂದರ್ಭದಲ್ಲಿ ಪಟ್ಟಣದ ಪ್ರಮುಖರು, ಹಿರಿಯರು ಹಾಗೂ ಭಕ್ತರು ಭಾಗವಹಿಸಿದ್ದರು.

ಬೆಳಿಗ್ಗೆಯಿಂದ ದೇವಸ್ಥಾನದಲ್ಲಿ ವಿಶೇಷ ಅಲಂಕಾರ ಹಾಗೂ ಪೂಜೆಗಳು ನೆರವೇರಿದವು. ಭಕ್ತರು ದೇವಾಲಯಕ್ಕೆ ಆಗಮಿಸಿ ದರ್ಶನಾಶೀರ್ವಾದ ಪಡೆದರು.

ಸಂಜೆ ನಡೆದ ರಥೋತ್ಸವ ಅಪಾರ ಭಕ್ತಸಾಗರದ ನಡುವೆ ವಿಜೃಂಭಣೆಯಿಂದ ನೆರವೇರಿತು. ರಥೋತ್ಸವದ ವೇಳೆ ಭಕ್ತರು ದೇವಿಯ ನಾಮಸ್ಮರಣೆ, "ಉದೋ ಉದೋ" ಘೋಷಣೆಗಳನ್ನು ಕೂಗಿ ಭಕ್ತಿ ವ್ಯಕ್ತಪಡಿಸಿದರು. ರಥಕ್ಕೆ ಉತ್ತತ್ತಿ, ಬೆಲ್ಲದ ಚೂರು ಹಾಗೂ ಬಾಳೆಹಣ್ಣು ಎಸೆದು ಹರಕೆ ಸಲ್ಲಿಸಿದರು.

ಇತ್ತೀಚೆಗೆ ವಿವಾಹವಾದ ನವಜೋಡಿಗಳು ಹೆಚ್ಚಿನ ಸಂಖ್ಯೆಯಲ್ಲಿ ರಥೋತ್ಸವಕ್ಕೆ ಆಗಮಿಸಿದ್ದೂ ಗಮನಾರ್ಹವಾಗಿತ್ತು. ಜಾತ್ರೆಯ ವಿಶೇಷ ಮಂಡಕ್ಕಿ ಮತ್ತು ಮಿರ್ಚಿ ಸವಿಯುವ ದೃಶ್ಯ ಸಾಮಾನ್ಯವಾಗಿ ಕಂಡು ಬಂತು.

ಶುಕ್ರವಾರ ಸಂಜೆ ಕಡುಬಿನ ಕಾಳಗ ಹಾಗೂ ಎಪ್ರಿಲ್ 4ರಿಂದ ಮೂರು ದಿನಗಳ ಕಾಲ ಕುಸ್ತಿ ಪಂದ್ಯಾವಳಿ ನಡೆಯಲಿದೆ.

# ಶ್ರೀ ಹಾಲೇಶ್ವರ ಶಿವಯೋಗಾಶ್ರಮದ ಅದ್ದೂರಿ ರಥೋತ್ಸವ

■ವಿಜಯಸಾಕ್ಷಿ ಸುದ್ದಿ, ಡಂಬಳ

ಪೇಠಾ ಆಲೂರ ಗ್ರಾಮದ ಆರಾಧ್ಯ ದೇವರಾದ ಶ್ರೀ ಹಾಲೇಶ್ವರ ಕೃಪಾ ಪೋಷಿತ ಶಿವಯೋಗಾಶ್ರಮದ 48ನೇ ಜಾತ್ರಾ ಮಹೋತ್ಸವವು ಭಕ್ತಿಭಾವದಿಂದ ಹಾಗೂ ವಿಜೃಂಭಣೆಯಿಂದ ಜರುಗಿತು.

ಪರಮಪೂಜ್ಯ ತ್ರಿವಿಧ ದಾಸೋಹಿ ಶ್ರೀ ಹಾಲೇಶ್ವರ ಶಿವಶರಣರು ಹಾಗೂ ನೆಗಳೂರಿನ ಪರಮಪೂಜ್ಯ ಷ.ಬ್ರ. ಗುರುಶಾಂತೇಶ್ವರ ಶ್ರೀಗಳು ಪೂಜಾ ವಿಧಾನಗಳ ಮೂಲಕ ರಥೋತ್ಸವಕ್ಕೆ ಚಾಲನೆ ನೀಡಿದರು.

ಜಾತ್ರಾ ಮಹೋತ್ಸವದ ಅಂಗವಾಗಿ ಬುಧವಾರ ರಾತ್ರಿ ಹಾಲಸ್ವಾಮಿ ಮುಳ್ಳು ಗದ್ದುಗೆ ಉತ್ಸವ ಸಂಭ್ರಮದಿಂದ ನಡೆಯಿತು. ಮಠದ ಧಾರ್ಮಿಕ ಪರಂಪರೆಯಂತೆ ಪೂಜಾ ವಿಧಿಗಳನ್ನು ನೆರವೇರಿಸಿದ ತ್ರಿವಿಧ ದಾಸೋಹಿ ಶ್ರೀ ಹಾಲೇಶ್ವರ ಶಿವಶರಣರು ಗದ್ದುಗೆಗೆ ಪೂಜೆ ಸಲ್ಲಿಸಿ ಮುಳ್ಳಿನ ಮಂಟಪ ಆರೋಹಣ ಮಾಡಿದರು.

"ಹಾಲಸ್ವಾಮಿ ದೊರೆಯೇ ನಿನಗಾರು ಸರಿಯೇ", "ಹರ ಹರ ಮಹಾದೇವ" ಎಂಬ ಭಕ್ತರ ಜಯಘೋಷಗಳ ನಡುವೆ ಉತ್ಸವ ಆರಂಭವಾಗಿ, ರಾತ್ರಿ 10.30ಕ್ಕೆ ಶ್ರೀಮಠದ ಬಳಿಯಿಂದ ಪ್ರಾರಂಭಗೊಂಡ ಮುಳ್ಳು ಗದ್ದುಗೆ ಉತ್ಸವ ಗ್ರಾಮದ ಮುಖ್ಯ ಬೀದಿಗಳಲ್ಲಿ ಸಂಚರಿಸಿ ಬೆಳಗಿನ ಜಾವ ಮೂಲ ಸ್ಥಳದಲ್ಲಿ ಸಂಪನ್ನಗೊಂಡಿತು.

ಸಮಾಳ, ನಂದಿಕೋಲು, ಮಂಗಳವಾದ್ಯ, ಡೊಳ್ಳು ಕುಣಿತ ಮೊದಲಾದ ವಾದ್ಯಗಳ ವೈಭವ ಉತ್ಸವಕ್ಕೆ ವಿಶೇಷ ಮೆರುಗು ನೀಡಿತು. ಸುತ್ತಮುತ್ತಲಿನ ಗ್ರಾಮಗಳಿಂದ ಅಪಾರ ಭಕ್ತರು ಭಾಗವಹಿಸಿದರು.

ಗುರುವಾರ ಸಂಜೆ 5.30ಕ್ಕೆ ವಿವಿಧ ವಾದ್ಯಮೇಳಗಳೊಂದಿಗೆ ರಥೋತ್ಸವ ವಿಜೃಂಭಣೆಯಿಂದ ನಡೆಯಿತು. ಭಕ್ತರು ರಥಕ್ಕೆ ಉತ್ತತ್ತಿ ಹಾಗೂ ಬಾಳೆಹಣ್ಣುಗಳನ್ನು ಎಸೆದು ಭಕ್ತಿಭಾವ ಸಮರ್ಪಿಸಿದರು.

ಈ ಸಂದರ್ಭದಲ್ಲಿ ಗ್ರಾಮದ ಹಿರಿಯರು, ಜಾತ್ರಾ ಸಮಿತಿ ಸದಸ್ಯರು, ಮಹಿಳೆಯರು ಹಾಗೂ ಯುವಕರು ಉಪಸ್ಥಿತರಿದ್ದರು.



# ಮಾನವೀಯ ಸೇವೆಗೆ ಕೈಜೋಡಿಸಿದ ಆನಂದ ಕೋರ್ಲಹಳ್ಳಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯದ ಸಚಿವರು ಹಾಗೂ ಹುಲಕೋಟಿಯ ಸಮಾಜ ಸೇವಾ ಸಂಸ್ಥೆಯ ಮುಖ್ಯಸ್ಥರಾದ ಎಚ್.ಕೆ. ಪಾಟೀಲ ಅವರ ನೇತೃತ್ವದಲ್ಲಿ ಪಂಚಾಕ್ಷರಿ ನಗರದ ಆಟೋ ಚಾಲಕ ಫಿರೋಜ್ ಖಾನ್ ಹೊಸಪೇಟೆ ಅವರಿಗೆ 2026ರ ಮಾರ್ಚ್ 16ರಂದು ಹುಲಕೋಟೆಯಲ್ಲಿ ಉಚಿತ ಕಿಡ್ನಿ ಟ್ರಾನ್ಸ್‌ಪ್ಲಾಂಟ್ ನೆರವೇರಿಸಲಾಗಿತ್ತು.

ಈ ಸೇವಾ ಕಾರ್ಯವನ್ನು ಯಶಸ್ವಿಯಾಗಿ ನೆರವೇರಿಸಲು ಸಹಕರಿಸಿದ ಆನಂದ ಕೋರ್ಲಹಳ್ಳಿ ಅವರನ್ನು ನಾಗ ಶಿವಾಲಯ ದೇವಸ್ಥಾನದಲ್ಲಿ ಆತ್ಮೀಯವಾಗಿ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಗಣ್ಯರು ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡವರ ಸೇವೆಯನ್ನು ಕೊಂಡಾಡಿದರು.

# ಮೂಲಭೂತ ಸೌಲಭ್ಯಗಳ ಕೊರತೆ-ಮನೆ ಹಂಚಿಕೆಯಲ್ಲಿ ಅನ್ಯಾಯ ಆರೋಪ!

## ಕೊಳಗೇರಿ ಅಭಿವೃದ್ಧಿಯಲ್ಲಿ ತಾರತಮ್ಯ ಆರೋಪ- ಪೌರಾಯುಕ್ತರಿಗೆ ಸ್ಲಂ ಸಮಿತಿಯಿಂದ ಮನವಿ

> "ಸ್ಲಂ ಪ್ರದೇಶಗಳ ಅಭಿವೃದ್ಧಿಯನ್ನು ನಿರ್ಲಕ್ಷಿಸಿದರೆ ಸಾವಿರಾರು ಜನರೊಂದಿಗೆ ನಗರಸಭೆಗೆ ಮುತ್ತಿಗೆ ಹಾಕುತ್ತೇವೆ."
> **– ಶರಣಪ್ಪ ಸೂಡಿ,** ಸ್ಲಮ್ ಸಮಿತಿ ಮುಖಂಡ.



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರದಲ್ಲಿನ ಕೊಳಗೇರಿ ಪ್ರದೇಶಗಳ ಅಭಿವೃದ್ಧಿಯಲ್ಲಿ ತಾರತಮ್ಯ ನೀತಿ ಅನುಸರಿಸಲಾಗುತ್ತಿದೆ ಎಂದು ಆರೋಪಿಸಿ, ಸ್ಲಂ ಜನಾಂದೋಲನ-ಕರ್ನಾಟಕ ಹಾಗೂ ಗದಗ ಜಿಲ್ಲಾ ಸ್ಲಂ ಸಮಿತಿ ಪದಾಧಿಕಾರಿಗಳು ನಗರಸಭೆ ಪೌರಾಯುಕ್ತರಿಗೆ ಮನವಿ ಸಲ್ಲಿಸಿ ಆಕ್ರೋಶ ವ್ಯಕ್ತಪಡಿಸಿದರು.

ನಗರದಲ್ಲಿ 80ಕ್ಕೂ ಹೆಚ್ಚು ಕೊಳಗೇರಿ ಪ್ರದೇಶಗಳಿದ್ದು, ಅವುಗಳಲ್ಲಿ 48 ಪ್ರದೇಶಗಳನ್ನು ಸ್ಲಂ ಕಾಯ್ದೆ 1973ರ ಪ್ರಕಾರ ಅಧಿಕೃತವಾಗಿ ಘೋಷಿಸಲಾಗಿದೆ. ಆದರೂ ಈವರೆಗೂ ಆ ಪ್ರದೇಶಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸುವಲ್ಲಿ ನಗರಸಭೆ ನಿರ್ಲಕ್ಷ್ಯ ತೋರಿದೆ ಎಂದು ಸಮಿತಿ ಆರೋಪಿಸಿದೆ.

ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ್ ಆರ್. ಮಾನ್ವಿ ಮಾತನಾಡಿ, "ಶೌಚಾಲಯ, ರಸ್ತೆ, ಬೀದಿ ದೀಪಗಳು, ವಸತಿ ಸೇರಿದಂತೆ ಅನೇಕ ಮೂಲಭೂತ ಸೌಲಭ್ಯಗಳಿಗಾಗಿ ಹಲವು ಬಾರಿ ಮನವಿ ಸಲ್ಲಿಸಿದ್ದರೂ ಅಧಿಕಾರಿಗಳು ಸ್ಪಂದಿಸುತ್ತಿಲ್ಲ. 2014ರಿಂದ ವಸತಿರಹಿತ ಕುಟುಂಬಗಳಿಗೆ ಮನೆ ಹಂಚಿಕೆಗಾಗಿ ಹೋರಾಟ ನಡೆಸಿದ್ದರೂ, ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಯಲ್ಲಿ ನಡೆದ ಎಡವಟ್ಟಿನಿಂದ 348 ನೈಜ ಕುಟುಂಬಗಳಿಗೆ ಅನ್ಯಾಯವಾಗಿದೆ. 2019ರಲ್ಲಿ ಮನೆ ಮಂಜೂರಾತಿ ಪತ್ರ ನೀಡಿದರೂ, ಹಂಚಿಕೆ ವೇಳೆ ನೈಜ ಫಲಾನುಭವಿಗಳನ್ನು ಕಡೆಗಣಿಸಲಾಗಿದೆ" ಎಂದು ಆರೋಪಿಸಿದರು.

ಮಹಿಳಾ ಸಮಿತಿ ಅಧ್ಯಕ್ಷೆ ಪರವೀಬಾನು ಹವಾಲ್ದಾರ ಮಾತನಾಡಿ, "ಸ್ವಚ್ಛ ಭಾರತ ಯೋಜನೆಯಡಿ ಶೌಚಾಲಯ ನಿರ್ಮಾಣಕ್ಕೆ ಅನುದಾನ ಇದ್ದರೂ, ಸ್ಲಂ ಪ್ರದೇಶಗಳಿಗೆ ಅದರ ಪ್ರಯೋಜನ ತಲುಪಿಲ್ಲ. ಸಾವಿರಾರು ಮಹಿಳೆಯರು ಇನ್ನೂ ಬಹಿರಂಗ ಶೌಚಕ್ಕೆ ಅವಲಂಬಿತರಾಗಿರುವುದು ವಿಷಾದನೀಯ" ಎಂದು ಹೇಳಿದರು.

ಮನವಿ ಸ್ವೀಕರಿಸಿದ ಪೌರಾಯುಕ್ತರು, ವಸತಿರಹಿತ ಅರ್ಹ ಫಲಾನುಭವಿಗಳಿಗೆ ಶೀಘ್ರದಲ್ಲಿ ಮನೆ ಹಂಚಿಕೆ ಮಾಡುವುದಾಗಿ ಹಾಗೂ ಸ್ಲಂ ಪ್ರದೇಶಗಳಲ್ಲಿ ಶೌಚಾಲಯ ನಿರ್ಮಾಣಕ್ಕೆ ಅಗತ್ಯ ಅನುದಾನ ಒದಗಿಸುವುದಾಗಿ ಭರವಸೆ ನೀಡಿದರು.

ಈ ವೇಳೆ ಸ್ಲಂ ಸಮಿತಿ ಕಾರ್ಯದರ್ಶಿ ಅಶೋಕ ಕುಸಬಿ, ಉಪಾಧ್ಯಕ್ಷ ಅಶೋಕ ಕುಡತಿನ್ನಿ, ಮುಖಂಡರಾದ ಇಬ್ರಾಹಿಂ ಮುಲ್ಲಾ, ಮೌಲಾಸಾಬ ಗಚ್ಚಿ, ಫೈರುಜಾ ನಾಗನೂರ, ಶಿವಪ್ಪ ಹಾತಲಗೇರಿ, ಮೆಹಬೂಬಸಾಬ ಬಳ್ಳಾರಿ, ಖಾಜಾಸಾಬ ಇಸ್ಮಾಯಿಲನವರ, ಗೌಸಸಾಬ ಅಕ್ಕಿ, ಸಾಕ್ರುಬಾಯಿ ಗೋಸಾವಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಬಾಲ್ಯದಲ್ಲೇ ಶಿಕ್ಷಣ-ಸಂಸ್ಕಾರ ಅಗತ್ಯ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರ ಪಟ್ಟಣದ 15ನೇ ವಾರ್ಡ್‌ನಲ್ಲಿರುವ ದ್ಯಾಮವ್ವ ದೇವಿ ದೇವಸ್ಥಾನದ ಪಕ್ಕದಲ್ಲಿ ನೂತನ ಅಂಗನವಾಡಿ ಕೇಂದ್ರ (ಸಂಖ್ಯೆ-194) ಕಟ್ಟಡ ನಿರ್ಮಾಣದ ಭೂಮಿ ಪೂಜೆ ಕಾರ್ಯಕ್ರಮವನ್ನು ಶಾಸಕ ಡಾ. ಚಂದ್ರು ಲಮಾಣಿ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಬಾಲ್ಯದಲ್ಲಿ ಮಕ್ಕಳಿಗೆ ದೊರೆಯುವ ಶಿಕ್ಷಣ ಹಾಗೂ ಸಂಸ್ಕೃತಿಯ ಮೌಲ್ಯಗಳು ಜೀವನಪೂರ್ತಿ ಉಳಿಯುತ್ತವೆ. ಆದ್ದರಿಂದ ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರ ಮತ್ತು ಸಂಪ್ರದಾಯಗಳನ್ನು ಕಲಿಸುವುದು ಅತ್ಯಂತ ಮುಖ್ಯ ಎಂದು ಹೇಳಿದರು.

ನಗರ ಯೋಜನೆ ಅಡಿಯಲ್ಲಿ 20 ಲಕ್ಷ ರೂ. ವೆಚ್ಚದಲ್ಲಿ ಸುಸಜ್ಜಿತ ಅಂಗನವಾಡಿ ಕಟ್ಟಡವನ್ನು ನಿರ್ಮಿಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಪ್ರಯತ್ನಿಸಲಾಗುವುದು ಎಂದು ತಿಳಿಸಿದರು.

ಪುರಸಭೆಯ ಮಾಜಿ ಸದಸ್ಯ ರಾಜೀವ್ ಕುಂಬಿ ಮಾತನಾಡಿ, ಈ ವಾರ್ಡ್‌ನಲ್ಲಿ ಹಲವು ವರ್ಷಗಳಿಂದ ಅಂಗನವಾಡಿ ಕೇಂದ್ರವು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿತ್ತು. ಈ ಕುರಿತು ಅಧಿಕಾರಿಗಳ ಗಮನಕ್ಕೆ ಹಲವು ಬಾರಿ ತರಲಾಗಿದ್ದು, ಪುರಸಭೆಯಿಂದ ಜಾಗವನ್ನು ಒದಗಿಸಲಾಗಿತ್ತು. ಇದೀಗ ಸ್ವಂತ ಕಟ್ಟಡ ನಿರ್ಮಾಣವಾಗುತ್ತಿರುವುದು ಸಂತಸದ ಸಂಗತಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪುರಸಭೆ ಮಾಜಿ ಸದಸ್ಯ ಶಂಕ್ರಪ್ಪ ಗುರಿಕಾರ, ಸಂಜೀವ ದೇಸಾಯಿ, ಗಂಗಾಧರ ಮೆಣಸಿನಕಾಯಿ, ಬಸವರಾಜ ಚಕ್ರಸಾಲಿ, ಸಿಡಿಪಿಓ ಮೃತ್ಯುಂಜಯ ಗುಡ್ಡದಾನ್ವೇರಿ, ಅಂಗನವಾಡಿ ಮೇಲ್ವಿಚಾರಕಿ ನಂದಾ ನವಲೆ, ಪ್ರವೀಣ ಬೋಮಲೆ, ಭೀಮಣ್ಣ ಯಂಗಾಡಿ, ವಿಜಯ ಕುಂಬಾರ, ಗಿರೀಶ ಚೌರಡ್ಡಿ, ವಿಶಾಲ ಬಟಗುರ್ಕಿ ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಯರಾದ ಡಿ.ವಿ. ಕೊಟ್ಟೂರ, ನಾಗಲಕ್ಷ್ಮಿ ಕುಲಕರ್ಣಿ, ರೂಪಾ ಕಟ್ಟಿಮನಿ, ಎಂ.ಎಸ್. ಚತ್ರದ, ಆರ್.ಎಸ್. ಚಂಗಾಪೂರ ಹಾಗೂ ಸಹಾಯಕಿಯರಾದ ನೀಲವ್ವ ಪೂಜಾರ, ಸಂಗೀತ ಸರ್ವೇ ಉಪಸ್ಥಿತರಿದ್ದರು.

# ನಾಳೆ ಜಿಲ್ಲಾ ಮಟ್ಟದ ಕವಿಗೋಷ್ಠಿ

■ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಕರ್ನಾಟಕ ಸಾಂಸ್ಕೃತಿಕ ಪರಿಷತ್ (ರಿ), ಬೆಂಗಳೂರು ಜಿಲ್ಲಾ ಘಟಕ ಗದಗ ಅವರ ಆಶ್ರಯದಲ್ಲಿ ಎಪ್ರಿಲ್ 5ರಂದು ಸಾಯಂಕಾಲ 4 ಗಂಟೆಗೆ ಬೆಟಗೇರಿ-ಗದಗದ ಡಾ. ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ನಂತರದ ವೃತ್ತಿಪರ ಬಾಲಕಿಯರ ವಿದ್ಯಾರ್ಥಿ ನಿಲಯದಲ್ಲಿ ಗದಗ ಜಿಲ್ಲಾ ಪ್ರಥಮ ಸಾಹಿತ್ಯ, ಸಾಂಸ್ಕೃತಿಕ ಮತ್ತು ಶೈಕ್ಷಣಿಕ ಸಮಾವೇಶ ಭವ್ಯವಾಗಿ ಜರುಗಲಿದೆ.

ಈ ಸಮಾರಂಭದ ಅಂಗವಾಗಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ, ಮಹಿಳಾ ಸಾಧಕಿಯರಿಗೆ ರಾಜ್ಯಮಟ್ಟದ ಪ್ರಶಸ್ತಿ ಪ್ರದಾನ, "ಭಾವ ಬಿಂದು ಕಾವ್ಯ ಸಿಂಧು" ಕವನ ಸಂಕಲನ ಲೋಕಾರ್ಪಣೆ ಹಾಗೂ ಜಿಲ್ಲಾ ಮಟ್ಟದ ಕವಿಗೋಷ್ಠಿ ಕಾರ್ಯಕ್ರಮಗಳು ನಡೆಯಲಿವೆ.

ಕಾರ್ಯಕ್ರಮಕ್ಕೆ ಶ್ರೀ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು (ಬ್ರಹನ್ಮಠ, ಅಡ್ನೂರ-ಗದಗ) ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಇಲಾಖೆಯ ಸಚಿವರು ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಕರ್ನಾಟಕ ವಿಧಾನ ಪರಿಷತ್ ಶಾಸಕರಾದ ಪ್ರೊ. ಎಸ್.ವಿ. ಸಂಕನೂರ ಅವರು ಕವನ ಸಂಕಲನವನ್ನು ಲೋಕಾರ್ಪಣೆ ಮಾಡಲಿದ್ದಾರೆ.

ಅಖಿಲ ಕರ್ನಾಟಕ ಸಾಂಸ್ಕೃತಿಕ ಪರಿಷತ್ತಿನ ರಾಜ್ಯಾಧ್ಯಕ್ಷ ಮನೋಹರ ನಾಯಕ ಅವರು ಸಾಧಕಿಯರಿಗೆ ರಾಜ್ಯಮಟ್ಟದ ಪ್ರಶಸ್ತಿಗಳನ್ನು ಪ್ರಧಾನ ಮಾಡಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀಮತಿ ರತ್ನಾ ಗಿ. ಬದಿ ವಹಿಸಿಕೊಳ್ಳಲಿದ್ದು, ಜಿಲ್ಲಾ ಮಟ್ಟದ ಕವಿಗೋಷ್ಠಿಯ ಅಧ್ಯಕ್ಷತೆಯನ್ನು ಗದಗ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷೆ ಡಾ. ರಶ್ಮಿ ಅಂಗಡಿ ವಹಿಸಲಿದ್ದಾರೆ.

ಕವಿಗೋಷ್ಠಿಯಲ್ಲಿ ಮರುಳಸಿದ್ದಪ್ಪ ದೊಡ್ಡಮನಿ, ಈರಣ್ಣ ಎಸ್. ಮಾದರ, ನೀಲಮ್ಮ ಅಂಗಡಿ, ಮಂಗಳಗೌರಿ ಹಿರೇಮಠ, ಆನಂದಕುಮಾರ್ ಟಿ. ಮೇಗಡಿ, ಎಂ.ಎಂ. ನಿಂಬನಾಯ್ಕರ, ಜ್ಯೋತಿ ಜವಳಿ, ರೇಣುಕಾ ಬಿ. ಜಗಂಡಭಾವಿ ಹಾಗೂ ರತ್ನವ್ವ ವೈ. ಬಬಲಿ ಅವರು ಕವನ ವಾಚನ ಮಾಡುವರು.

ವಿಶೇಷ ಆಹ್ವಾನಿತ ಅತಿಥಿಗಳಾಗಿ ರಾಜ್ಯ ಕಾರ್ಯದರ್ಶಿ ಜಿ.ಎಸ್. ಬಿರಾದಾರ, ರಾಜ್ಯ ಸಂಚಾಲಕ ಆನಂದ ಹಕ್ಕೆನ್ನವರ ಸೇರಿದಂತೆ ಅಖಿಲ ಕರ್ನಾಟಕ ಸಾಂಸ್ಕೃತಿಕ ಪರಿಷತ್ತಿನ ಗದಗ ಜಿಲ್ಲೆಯ ವಿವಿಧ ತಾಲೂಕುಗಳ ಅಧ್ಯಕ್ಷರುಗಳಾದ ಎನ್.ವಿ. ರಾಠೋಡ, ಶ್ರೀಮತಿ ಗೀತಾ ಹಲಸೂರ, ಪಂಚಯ್ಯ ವಿ. ಹಿರೇಮಠ, ಮಹೇಶ್ ಎಚ್. ಪ್ರಭುಗೌಡ, ವೀರಣ್ಣ ಹೂಗಾರ ಹಾಗೂ ಶರಣಪ್ಪ ಭಾವಿಕಟ್ಟಿ ಉಪಸ್ಥಿತರಿರಲಿದ್ದಾರೆ.

# ಐಎಎಸ್ ಪರೀಕ್ಷೆಯಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದ ಕಿರಣ ಕಮತೆಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಐ.ಎ.ಎಸ್. ಪರೀಕ್ಷೆಯಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಹಾಗೂ ರಾಷ್ಟ್ರ ಮಟ್ಟದಲ್ಲಿ 53ನೇ ರ್‍ಯಾಂಕ್ ಪಡೆದ ಕಿರಣ ಕಮತೆ ಅವರನ್ನು ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ ಅವರ ಗೃಹ ಕಚೇರಿಯಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಕಿರಣ ಕಮತೆ ಅವರ ಪೋಷಕರಾದ ಸಣ್ಣಪ್ಪ ಮತ್ತು ರುಕ್ಮಿಣಿ ಕಮತೆ ಅವರನ್ನೂ ಸನ್ಮಾನಿಸಲಾಯಿತು.

ಕಠಿಣ ಪರಿಶ್ರಮ ಮತ್ತು ದಿಟ್ಟ ಸಂಕಲ್ಪದ ಮೂಲಕ ಸಾಧಿಸಿದ ಈ ಯಶಸ್ಸು ಯುವಕರಿಗೆ ಪ್ರೇರಣೆಯಾಗಲಿದೆ ಎಂದು ಗಣ್ಯರು ಅಭಿಪ್ರಾಯಪಟ್ಟರು.

ಸನ್ಮಾನ ಸಮಾರಂಭದಲ್ಲಿ ತೋಂಟದಾರ್ಯ ವಿದ್ಯಾಪೀಠದ ಆಡಳಿತಾಧಿಕಾರಿ ಶಿವಾನಂದ ಪಟ್ಟಣಶೆಟ್ಟಿ, ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನ ಉಪನ್ಯಾಸಕರಾದ ಡಿ.ಬಿ. ರೇವಣಕರ, ಅಶೋಕ ಅಂಗಡಿ, ಎಸ್.ಐ. ಮೇಟಿ, ಕೊಟ್ರೇಶ ಮೆಣಸಿನಕಾಯಿ, ಪ್ರಕಾಶ ಬಂಡಿ ಹಾಗೂ ಎಸ್.ವಿ. ಜೋಶಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಈ ವೇಳೆ ಮಾತನಾಡಿದ ಗಣ್ಯರು, ಕಿರಣ ಕಮತೆ ಅವರ ಸಾಧನೆ ಗದಗ ಜಿಲ್ಲೆಯ ಹೆಮ್ಮೆ ಹೆಚ್ಚಿಸಿದ್ದು, ಇತರ ವಿದ್ಯಾರ್ಥಿಗಳು ಕೂಡಾ ಇಂತಹ ಸಾಧನೆಗಾಗಿ ಪ್ರೇರಣೆ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು.

# ಎ. 8ರಿಂದ -ಸಾವಿರ ಕೆರೆಗಳ ಸರದಾರ ಟ್ರೋಫಿ- ಪಂದ್ಯಾವಳಿ

## ಜಿ. ಎಸ್. ಪಾಟೀಲ ಜನ್ಮ ದಿನದ ಪ್ರಯುಕ್ತ ಕ್ರಿಕೆಟ್ ಪಂದ್ಯಾವಳಿ




■ವಿಜಯಸಾಕ್ಷಿ ಸುದ್ದಿ, ನರೇಗಲ್

ಪಟ್ಟಣದ 3ನೇ ವಾರ್ಡ್‌ನ ಆಶ್ರಯ ಕಾಲೋನಿ ಹಾಗೂ ಬುಲ್ಡೋಜರ್ ನಗರದ ನಿವಾಸಿಗಳ ಆಶ್ರಯದಲ್ಲಿ ರೋಣ ಮತಕ್ಷೇತ್ರದ ಶಾಸಕರಾದ ಜಿ. ಎಸ್. ಪಾಟೀಲ ಅವರ ಜನ್ಮ ದಿನದ ಪ್ರಯುಕ್ತ ಸಾವಿರ ಕೆರೆಗಳ ಸರದಾರ ಟ್ರೋಫಿ- ಎನ್ನುವ 7 ಸೈಡ್ ಓಪನ್ ಹಾರ್ಡ್ ಟೆನ್ನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿಯನ್ನು ಎಪ್ರಿಲ್ 8 ರಿಂದ ಆಯೋಜಿಸಲಾಗಿದೆ ಎಂದು ಆಯೋಜಕ ತಂಡದ ಸದ್ದಾಂ ನಶೇಖಾನ್ ತಿಳಿಸಿದ್ದಾರೆ.

ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿ ನೀಡಿರುವ ಅವರು, ರೋಣ ಮತಕ್ಷೇತ್ರದಲ್ಲಿ ಅಂತರ್ಜಲ ಅಭಿವೃದ್ಧಿ, ಕುಡಿಯುವ ನೀರಿನ ಸಮಸ್ಯೆಗೆ ಪರಿಹಾರ ಒದಗಿಸಿದ ಹಾಗೂ ಅವರ ಆರಂಭದ ದಿನಗಳಿಂದ ಇಲ್ಲಿಯವರೆಗೆ ಸಾವಿರ ಕೆರೆಗಳನ್ನು ನಿರ್ಮಿಸಿ ಸಾಧನೆ ಮಾಡಿರುವ ಜನಪ್ರಿಯ ಶಾಸಕರಾಗಿರುವ ಹಾಗೂ ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರಾಗಿರುವ ಜಿ. ಎಸ್. ಪಾಟೀಲರವರ ಜನ್ಮ ದಿನದ ಅಂಗವಾಗಿ ಸಾವಿರ ಕೆರೆಗಳ ಸರದಾರ ಟ್ರೋಫಿ ಎನ್ನುವ ಟೈಟಲ್‌ನಲ್ಲಿ 7ಸೈಡ್ ಹಾರ್ಡ್ ಟೆನ್ನಿಸ್ ಕ್ರಿಕೆಟ್ ಟೂರ್ನಾಮೆಂಟ್ ಅನ್ನು ಆಯೋಜನೆ ಮಾಡಲಾಗಿದೆ. ಶಾಸಕರು ನೀರಿಗೆ, ಕೃಷಿ ಭೂಮಿಗೆ ನೀಡಿರುವ ಮಹತ್ವವನ್ನು ಅನಾವರಣ ಮಾಡುವ ಪಂದ್ಯಾವಳಿ ಇದಾಗಿದೆ ಎಂದು ಮಾಹಿತಿ ನೀಡಿದ್ದಾರೆ.

50ಕಿಮೀ ಕ್ಕಿಂತ ಹೆಚ್ಚಿನ ದೂರದಿಂದ ಬರುವ ಪ್ರತಿ ತಂಡಕ್ಕೂ ಉಚಿತ ಪ್ರವೇಶ ನೀಡಲಾಗಿದೆ. ಪ್ರಥಮ ಬಹುಮಾನ 30 ಸಾವಿರ, ದ್ವಿತೀಯ ಬಹುಮಾನ 20 ಸಾವಿರ, ತೃತೀಯ ಬಹುಮಾನ 10 ಸಾವಿರ ಹಾಗೂ ಚತುರ್ಥ ಬಹುಮಾನ 5 ಸಾವಿರವಿದೆ. ಸರಣಿಯ ಉತ್ತಮ ಬ್ಯಾಟ್ಸ್‌ಮನ್, ಬೌಲರ್, ಸರ್ವೋತ್ತಮ ಆಟಗಾರರಿಗೆ ಸೈಕಲ್ ಬಹುಮಾನವಿದೆ. ಉತ್ತಮ ತಂಡ, ಮ್ಯಾನ್ ಆಫ್ ದಿ ಮ್ಯಾಚ್ ಪ್ರಶಸ್ತಿಗಳನ್ನು ಸಹ ನೀಡಲಾಗುತ್ತದೆ. ಉಪಹಾರದ ವ್ಯವಸ್ಥೆಯನ್ನು ಮಾಡಲಾಗಿದೆ. ಪಾಲ್ಗೊಳ್ಳುವ ತಂಡದವರು 9886427170, 7204241472, 8880729118, 8431534305 ನಂಬರ್‌ಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದರು. ನಾಲ್ಕು ದಿನಗಳು ನಡೆಯುವ ಈ ಪಂದ್ಯಾವಳಿಯನ್ನು ರೋಣ ಶಾಸಕರಾದ ಜಿ. ಎಸ್. ಪಾಟೀಲರು ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ರೋಣ ತಾಲ್ಲೂಕು ಗ್ಯಾರಂಟಿ ಅಧ್ಯಕ್ಷ ಮಿಥುನ್ ಜಿ. ಪಾಟೀಲ, ಕರ್ನಾಟಕ ಪ್ರದೇಶ ಯುವ ಕಾಂಗ್ರೆಸ್ ಸಮಿತಿಯ ರಾಜ್ಯ ಪ್ರಧಾನ ಕಾರ್ಯದರ್ಶಿ ಅಕ್ಷಯ ಐ. ಪಾಟೀಲ ಹಾಗೂ ನರೇಗಲ್ ಪಟ್ಟಣದ ಹಿರಿಯರು, ಮುಖಂಡರು, ಕ್ರೀಡಾಭಿಮಾನಿಗಳು ಪಾಲ್ಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

# ಹನುಮಂತನನ್ನು ಭಜಿಸಿದರೆ ಶಕ್ತಿ, ಯುಕ್ತಿ ದೊರಕುತ್ತದೆ



■ವಿಜಯಸಾಕ್ಷಿ ಸುದ್ದಿ, ನರೇಗಲ್

ಹನುಮಂತ ಅತ್ಯಂತ ಶಕ್ತಿಶಾಲಿ ಭಗವಂತ. ಅವನು ಎಂದಿಗೂ ಚಿರಂಜೀವಿ. ಅವನ್ನು ಭಜಿಸಿದರೆ ಶಕ್ತಿ, ಮುಕ್ತಿ, ಭಕ್ತಿ ಮತ್ತು ಯುಕ್ತಿಗಳು ದೊರಕುತ್ತವೆ ಎಂದು ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಹೇಳಿದರು.

ಪಟ್ಟಣದ ಜಕ್ಕಲಿ ಕ್ರಾಸ್‌ನಲ್ಲಿರುವ ಶ್ರೀ ಹನುಮಂತ ದೇವಸ್ಥಾನದಲ್ಲಿ ನಡೆದ ಹನುಮ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಜಾತಿ, ಮತ, ಪಂಥಗಳೆಲ್ಲವನ್ನೂ ಮೀರಿದ ದೇವರು ಹನುಮಂತನಾಗಿದ್ದಾನೆ. ಆದ್ದರಿಂದಲೆ ಸರ್ವ ಧರ್ಮೀಯರೂ ಅವನನ್ನು ಪೂಜಿಸುತ್ತಾರೆ. ಮಂಗಳವಾರ ಹನುಮಂತನಿಗೆ ಅತ್ಯಂತ ಪ್ರಿಯವಾದ ದಿನ. ಏಕೆಂದರೆ ಅವನು ಜನಿಸಿದ್ದು ಮಂಗಳವಾರವೆ. ಆದ್ದರಿಂದ ಮಂಗಳವಾರ ದಿವಸ ಯಾರು ಭಕ್ತಿಯಿಂದ ಅನನ್ಯವಾಗಿ ಹನುಮಂತನನ್ನು ಪೂಜಿಸುತ್ತಾರೆಯೋ ಅವರಿಗೆಲ್ಲ ಶೀಘ್ರಫಲ ಪ್ರಾಪ್ತಿಗಳಾಗುತ್ತವೆ ಎಂದರು. ಹನುಮಂತನಿಗೆ ಕೆಂಪು ಹೂವನ್ನು ಅರ್ಪಿಸಿ ತೆಂಗಿನಕಾಯಿ, ಬೆಲ್ಲ, ಕಾಳು ಮತ್ತು ವೀಳ್ಯೆದೆಲೆಯ ನೈವೇದ್ಯ ಮಾಡಿದರೆ ಆತ ಸಂಪ್ರೀತನಾಗುತ್ತಾನೆ. ಹನುಮಂತನಿಂದ ಫಲ ಪಡೆಯಲು ಕೆಲವಷ್ಟು ಆಚರಣೆಗಳನ್ನು ಮಾಡಬೇಕು. ಆರ್ಥಿಕ ಸಂಕಷ್ಟದಿಂದ ಪಾರಾಗಲು ಪ್ರತಿ ಮಂಗಳವಾರ ಸಾಸಿವೆ ಎಣ್ಣೆಯ ದೀಪವನ್ನು ಹಚ್ಚಿ ಹನುಮಾನ್ ಚಾಲೀಸಾ ಪಠಣೆ ಮಾಡಬೇಕು. ಸಂಪತ್ತು ವೃದ್ಧಿಯಾಗಬೇಕೆಂದರೆ ಹನುಮಂತನಿಗೆ ತುಳಸಿ ಮಾಲೆಯನ್ನು ಅರ್ಪಿಸಬೇಕು.

ಸರ್ವ ದೋಷಗಳ ಪರಿಹಾರವಾಗಬೇಕಾದರೆ 11 ಅಶ್ವತ್ಥ ವೃಕ್ಷದ ಎಲೆಗಳನ್ನು ತೆಗೆದುಕೊಂಡು ಶ್ರೀಗಂಧದಿಂದ ಅದರ ಮೇಲೆ ಶ್ರೀರಾಮ ಎಂದು ಬರೆದು ಹನುಮಂತನಿಗೆ ಅರ್ಪಿಸಿದರೆ ದೋಷ ಪರಿಹಾರವಾಗುತ್ತದೆ. ಸಂತಾನ ಭಾಗ್ಯ ಬಯಸುವವರು ಪ್ರತಿ ಮಂಗಳವಾರ ಹನುಮಂತನ ಹೆಸರಿನಲ್ಲಿ 21 ವಾರಗಳ ಕಾಲ ಉಪವಾಸ ಮಾಡಿ ಹನುಮಂತನಲ್ಲಿ ಬೇಡಿಕೊಳ್ಳಬೇಕು. ಗೋಗ್ರಾಸ ನೀಡುವುದರಿಂದ ಸಕಲವೂ ಪ್ರಾಪ್ತಿಯಾಗುತ್ತದೆ ಎನ್ನುವ ನಂಬಿಗೆ ಶಾಸ್ತ್ರದಲ್ಲಿ ಇದ್ದು, ಇದು ಎಲ್ಲವನ್ನೂ ಶ್ರದ್ಧೆ ಭಕ್ತಿಯಿಂದ ಆಚರಿಸಿದರೆ ಫಲಪ್ರಾಪ್ತಿ ಆಗುತ್ತದೆ ಎಂದರು.

ಸುಮಂಗಲೆಯರು ಶ್ರೀ ಆಂಜನೇಯನನ್ನು ತೊಟ್ಟಿಲಲ್ಲಿ ಹಾಕಿ ಜೋಗುಳ ಹಾಡಿದರು. ಈ ಸಂದರ್ಭದಲ್ಲಿ ಗುರುರಾಜ ಕುಲಕರ್ಣಿ, ಜಗನ್ನಾಥ ಸೂರಭಟ್ಟನವರ, ಅಜಿತ ಕುಲಕರ್ಣಿ, ನಾಗರಾಜ ನಾಡಿಗೇರ, ಆನಂದ ಕಾಳೆ, ಪ್ರಶಾಂತ ಗ್ರಾಮಪುರೋಹಿತ, ಎ. ಟಿ. ಮಳ್ಳಳ್ಳಿ, ವಿಕಾಸ ಸೂರಭಟ್ಟನವರ, ಪ್ರತೀಕ್ಷಾ ಕುಲಕರ್ಣಿ, ಶಾರದಾಬಾಯಿ ಗ್ರಾಮಪುರೋಹಿತ, ಅರ್ಚನಾ ಕುಲಕರ್ಣಿ, ಶೋಭಾ ಸೂರಭಟ್ಟನವರ, ಸಂಧ್ಯಾ ಕುಲಕರ್ಣಿ, ಲಕ್ಷ್ಮಿ ಗ್ರಾಮಪುರೋಹಿತ, ಅರ್ಚನಾ ಕುಲಕರ್ಣಿ, ರೂಪಾ ಗ್ರಾಮಪುರೋಹಿತ, ಜ್ಯೋತಿ ನಾಡಿಗೇರ, ಪಲ್ಲವಿ ಗ್ರಾಮಪುರೋಹಿತ, ಪ್ರಿಯಾ ನಾಡಿಗೇರ, ಭಾರತಿಬಾಯಿ ಗ್ರಾಮಪುರೋಹಿತ, ಸನ್ಮತಿ ಸದರಜೋಷಿ, ಪ್ರಿಯಾ ಕುಲಕರ್ಣಿ ಹಾಜರಿದ್ದರು.

# ಈಶ್ವರ ದೇವಸ್ಥಾನದಲ್ಲಿ ಹನುಮ ಜಯಂತಿ ಸಂಭ್ರಮ



■ವಿಜಯಸಾಕ್ಷಿ ಸುದ್ದಿ, ಗದಗ

ಶಿವಬಸವ ನಗರದ ಶ್ರೀ ಈಶ್ವರ ದೇವಸ್ಥಾನದ ಅರ್ಚಕರು ಹಾಗೂ ಓಣಿಯ ಮಹಿಳಾ ಮಂಡಳಿಯವರಿಂದ ಹನುಮ ಜಯಂತಿಯನ್ನು ಸಂಭ್ರಮ ಹಾಗೂ ವಿಜೃಂಭಣೆಯಿಂದ ಆಚರಿಸಲಾಯಿತು, ಹನುಮ ಜಯಂತಿ ನಿಮಿತ್ತ ಈಶ್ವರ ದೇವಸ್ಥಾನದ ಸಾಕ್ಷಾತ್ ಶಿವನ ಸ್ವರೂಪಿ ಈಶ್ವರ ದೇವರಿಗೆ ಭಕ್ತರು ಪುಷ್ಪಗಳಿಂದ ಅಲಂಕರಿಸಿ ವಿಶೇಷ ಪೂಜೆ ಸಲ್ಲಿಸಿದರು.

ಸಂಜೆ ಗೋಧೂಳಿ ಮುಹೂರ್ತದಲ್ಲಿ ಓಣಿಯ ಮಹಿಳೆಯರು ಭಕ್ತಿಯಿಂದ ಶ್ರೀ ರಾಮ ತಾರಕ ಮಂತ್ರ ಹಾಗೂ ಹನುಮಾನ್ ಚಾಲಿಸಾ ಪಠಣ ಮಾಡುತ್ತಾ ರಾಮಕೋಟಿ ಬರೆದು ಶ್ರದ್ಧಾ ಭಕ್ತಿಯನ್ನು ಸಮರ್ಪಿಸಿದರು. ನಂತರ ಶ್ರೀ ರಾಮಚಂದ್ರ ಹಾಗೂ ರಾಮಭಕ್ತ ಹನುಮಂತನ ಕುರಿತ ಹಲವು ಭಕ್ತಿಗೀತೆಗಳೊಂದಿಗೆ ಭಜನೆಯನ್ನು ಮಾಡುತ್ತಾ ಭಕ್ತಿ ಸೇವೆ ಗೈದರು.

ಈ ಸಂದರ್ಭದಲ್ಲಿ ದೇವಸ್ಥಾನದ ಅರ್ಚಕರು, ಓಣಿಯ ಮಹಿಳಾ ಮಹನೀಯರು, ಹಿರಿಯ ಮುಖಂಡರು ಹಾಗೂ ನೂರಾರು ಭಕ್ತರು ಭಾಗಿಯಾಗಿ ದೇವರ ದರ್ಶನ ಪಡೆದರು.

ಮನೆ-ಮನೆಗೆ ಭೇಟಿ ಮೂಲಕ ಮಕ್ಕಳ ದಾಖಲಾತಿಗೆ ಪ್ರೇರಣೆ-ಬುರಡಿ

# "ನಮ್ಮ ಶಾಲೆ - ನಮ್ಮ ಜವಾಬ್ದಾರಿ" ಅಭಿಯಾನಕ್ಕೆ ಒತ್ತು

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಖಾಸಗಿ ಶಾಲೆಗಳ ಪೈಪೋಟಿಯ ನಡುವೆಯೂ ಸರಕಾರಿ ಶಾಲೆಗಳ ಶ್ರೇಯೋಭಿವೃದ್ಧಿಗೆ ಸರ್ಕಾರ ವಿವಿಧ ಯೋಜನೆಗಳನ್ನು ಜಾರಿಗೊಳಿಸುತ್ತಿದ್ದು, ದಾಖಲಾತಿ ಹೆಚ್ಚಿಸಲು ರಾಜ್ಯವ್ಯಾಪಿ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗಿದೆ.

ಪ್ರತಿ ಮಗು ಶಿಕ್ಷಣದಿಂದ ವಂಚಿತವಾಗಬಾರದು ಎಂಬ ಧ್ಯೇಯದೊಂದಿಗೆ ಕ್ಲಸ್ಟರ್ ಹಾಗೂ ತಾಲೂಕು ಹಂತದಲ್ಲಿ ದಾಖಲಾತಿ ಆಂದೋಲನ ನಡೆಯುತ್ತಿದೆ. ಗ್ರಾಮ ಮಟ್ಟದಲ್ಲಿ ಶಿಕ್ಷಕರು, ಮುಖ್ಯ ಶಿಕ್ಷಕರು, ಎಸ್‌ಡಿಎಂಸಿ ಪದಾಧಿಕಾರಿಗಳು ಹಾಗೂ ಹಳೆಯ ವಿದ್ಯಾರ್ಥಿಗಳ ಸಹಕಾರದಿಂದ ಅರ್ಹ ಮಕ್ಕಳನ್ನು ಗುರುತಿಸಿ ಮನೆ-ಮನೆಗೆ ಭೇಟಿ ನೀಡಿ ಸರ್ಕಾರಿ ಶಾಲೆಗಳಲ್ಲಿ ದಾಖಲಿಸಲು ಮನವೊಲಿಸುವ ಕಾರ್ಯ ಜೋರಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಜಿಲ್ಲಾ



ಉಪನಿರ್ದೇಶಕ ಆರ್.ಎಸ್. ಬುರಡಿ ತಿಳಿಸಿದ್ದಾರೆ.

ಶಾಲಾ ವಯೋಮಾನದ ಪ್ರತಿಯೊಂದು ಮಗು ಗುಣಮಟ್ಟದ ಶಿಕ್ಷಣ ಪಡೆಯುವಂತೆ ಶಾಲಾ ಪರಿಸರವನ್ನು ಸುಧಾರಿಸಲು ಆದ್ಯತೆ ನೀಡಲಾಗಿದೆ. ಶಾಲಾ ಕಟ್ಟಡಗಳಿಗೆ ಸುಣ್ಣ ಬಣ್ಣ ಬಳಿದು ಆಕರ್ಷಕ ವಾತಾವರಣ ನಿರ್ಮಿಸುವುದು, ಚಟುವಟಿಕೆ ಆಧಾರಿತ ಕಲಿಕೆ ಮೂಲಕ ಮಕ್ಕಳಲ್ಲಿ ಆಸಕ್ತಿ ಮೂಡಿಸುವುದು, ಹಾಜರಾತಿ ಹೆಚ್ಚಿಸುವುದು ಹಾಗೂ ಮಕ್ಕಳ ಸುರಕ್ಷತೆ ಮತ್ತು ಸ್ವಚ್ಛತೆಗೆ ವಿಶೇಷ ಗಮನ ಹರಿಸಲಾಗುತ್ತಿದೆ.

ಇದರ ಜೊತೆಗೆ ಪೋಷಕರಲ್ಲಿ ಜಾಗೃತಿ ಮೂಡಿಸಲು ಸರ್ಕಾರದ ವಿವಿಧ ಯೋಜನೆಗಳು, ಪ್ರೋತ್ಸಾಹಕ ಕಾರ್ಯಕ್ರಮಗಳು, ಪಾಠಾಧಾರಿತ ಮೌಲ್ಯಮಾಪನ ಹಾಗೂ ಕಲಿಕಾ ಸೌಲಭ್ಯಗಳ ಕುರಿತು ಅರಿವು

> "ಪ್ರತಿ ಮಗು ಗುಣಮಟ್ಟದ ಶಿಕ್ಷಣ ಪಡೆಯಬೇಕು ಎಂಬುದೇ ನಮ್ಮ ಗುರಿ."
> – **ಆರ್.ಎಸ್. ಬುರಡಿ,** ಡಿಡಿಪಿಐ, ಗದಗ.

ಮೂಡಿಸಲಾಗುತ್ತಿದೆ.

"ನಮ್ಮ ಶಾಲೆ - ನಮ್ಮ ಜವಾಬ್ದಾರಿ" ಅಭಿಯಾನದಡಿ ಸಮುದಾಯದ ಬೆಂಬಲವನ್ನು ಹೆಚ್ಚಿಸಲು ದಾನಿಗಳ ಸಹಕಾರ ಪಡೆಯುವುದು, ಹಳೆಯ ವಿದ್ಯಾರ್ಥಿಗಳ ಸಂಘಟನೆಗಳನ್ನು ಬಲಪಡಿಸುವುದು ಹಾಗೂ ವಾಟ್ಸಾಪ್ ಗುಂಪುಗಳ ಮೂಲಕ ಶಾಲಾ ಅಭಿವೃದ್ಧಿಗೆ ಕೈಜೋಡಿಸುವ ಕ್ರಮಗಳನ್ನು ಕೈಗೊಳ್ಳಲಾಗಿದೆ. ವಿದ್ಯಾರ್ಥಿಗಳ ಸಾಧನೆಗಳನ್ನು ಗುರುತಿಸಿ ಪ್ರತಿಭಾ ಪುರಸ್ಕಾರ ನೀಡುವುದು ಹಾಗೂ ಶಾಲಾ ಚಟುವಟಿಕೆಗಳಲ್ಲಿ ಪಾಲಕರ ಭಾಗವಹಿಸುವಿಕೆಯನ್ನು ಹೆಚ್ಚಿಸುವುದಕ್ಕೂ ಆದ್ಯತೆ ನೀಡಲಾಗಿದೆ.

ಇದೇ ವೇಳೆ ಡಿಡಿಪಿಐ ಆರ್.ಎಸ್. ಬುರಡಿ ಅವರು ಶಿರಹಟ್ಟಿ ತಾಲೂಕಿನ ಪ್ರಧಾನ ಗುರುಗಳ ಸಭೆ ನಡೆಸಿ, ಬಿಇಒ ಹಾಗೂ ಕ್ಲಸ್ಟರ್ ಮಟ್ಟದ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಿರುವುದು ಸಾರ್ವಜನಿಕ ವಲಯದಲ್ಲಿ ಪ್ರಶಂಸೆಗೆ ಪಾತ್ರವಾಗಿದೆ.

"ಸರ್ಕಾರವು ದ್ವಿಭಾಷಾ ಶಾಲೆಗಳು, ಎಲ್‌ಕೆಜಿ/ಯುಕೆಜಿ, ಕೆಪಿಎಸ್ ಸೇರಿದಂತೆ ಹಲವು ಉಪಕ್ರಮಗಳ ಮೂಲಕ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸುತ್ತಿದೆ. ದಾಖಲಾತಿ ಅಭಿಯಾನದ ಅಂತಿಮ ಹಂತವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ತಾಲೂಕು ಮಟ್ಟದಲ್ಲಿ ಸಭೆಗಳನ್ನು ನಡೆಸಿ ಶಿಕ್ಷಕರಿಗೆ ಮಾರ್ಗದರ್ಶನ ನೀಡಲಾಗಿದೆ" ಎಂದು ಅವರು ತಿಳಿಸಿದ್ದಾರೆ.

ಅಂಬೇಡ್ಕರ್ ಜಯಂತಿ ಅಂಗವಾಗಿ ವಿಜಯಪುರದಲ್ಲಿ ಮೇಳ; ಜ್ಞಾನ, ಸಮಾನತೆ ಸಂದೇಶ ಹರಡುವ ಉದ್ದೇಶ

# ಎ. 10ರಿಂದ ಐದು ದಿನ ಬುದ್ಧ-ಬಸವ-ಭೀಮರಾವ್ ಪುಸ್ತಕ ಮೇಳ



■ವಿಜಯಸಾಕ್ಷಿ ಸುದ್ದಿ, ಗದಗ

ಸಾಹಿತ್ಯ ಮೇಳ ಬಳಗ, ವಿಜಯಪುರ ಹಾಗೂ ದಲಿತ-ಅಲ್ಪಸಂಖ್ಯಾತ ಸಂಘಟನೆಗಳ ಒಕ್ಕೂಟದ ಸಹಯೋಗದಲ್ಲಿ ಡಾ. ಬಾಬಾ ಸಾಹೇಬ ಅಂಬೇಡ್ಕರ್ ಅವರ ಜಯಂತಿಯ ಅಂಗವಾಗಿ ಎಪ್ರಿಲ್ 10ರಿಂದ ಐದು ದಿನಗಳ ಕಾಲ ಬುದ್ಧ-ಬಸವ-ಅಂಬೇಡ್ಕರ್ ಪುಸ್ತಕ ಮೇಳವನ್ನು ಆಯೋಜಿಸಲಾಗಿದೆ.

> "ಪುಸ್ತಕಗಳು ಮನಸ್ಸನ್ನು ಜಾಗೃತಗೊಳಿಸುತ್ತವೆ; ಚಿಂತನೆ ಬದಲಾದಾಗ ಸಮಾಜವೂ ಬದಲಾಗುತ್ತದೆ."
> – **ಡಾ. ರಾಮಚಂದ್ರ ಹಂಸನೂರ,** ಸಾಹಿತಿ.

ಈ ಹಿನ್ನೆಲೆಯಲ್ಲಿ ನಗರದ ಗದಗ-ಬೆಟಗೇರಿ ನಗರಸಭೆ ಆವರಣದಲ್ಲಿರುವ ಡಾ. ಬಾಬಾ ಸಾಹೇಬ ಅಂಬೇಡ್ಕರ್ ಅವರ ಪುತ್ಥಳಿ ಮುಂದೆ ಪುಸ್ತಕ ಮೇಳದ ಪೋಸ್ಟರ್ ಬಿಡುಗಡೆಗೊಳಿಸಲಾಯಿತು.

ಪೋಸ್ಟರ್ ಬಿಡುಗಡೆಗೊಳಿಸಿ ಮಾತನಾಡಿದ ಸಾಹಿತಿ ಡಾ. ರಾಮಚಂದ್ರ ಹಂಸನೂರ, ಇಂತಹ ಮೇಳಗಳು ಸಮಾಜದಲ್ಲಿ ಚಿಂತನೆ ಮತ್ತು ಜಾಗೃತಿ ಮೂಡಿಸುವ ಪ್ರಮುಖ ವೇದಿಕೆಗಳಾಗಿವೆ ಎಂದು ಹೇಳಿದರು. ಮಹನೀಯರ ಚಿಂತನೆಗಳನ್ನು ಜನಸಾಮಾನ್ಯರಿಗೆ ತಲುಪಿಸುವಲ್ಲಿ ಪುಸ್ತಕಗಳ ಪಾತ್ರ ಮಹತ್ವದ್ದಾಗಿದೆ ಎಂದು ಅಭಿಪ್ರಾಯಪಟ್ಟರು.

ಬುದ್ಧ, ಬಸವ ಹಾಗೂ ಅಂಬೇಡ್ಕರ್ ಅವರ ವಿಚಾರಧಾರೆಗಳು ಸಮಾನತೆ, ಶಿಕ್ಷಣ ಹಾಗೂ ನ್ಯಾಯದ ಮೌಲ್ಯಗಳನ್ನು ಸಾರುತ್ತವೆ. ಈ ಹಿನ್ನೆಲೆಯಲ್ಲಿ ಅವರ ಹೆಸರಿನಲ್ಲಿ ಮೇಳ ಆಯೋಜಿಸಿರುವುದು ಅರ್ಥಪೂರ್ಣವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ದಲಿತ ಮುಖಂಡರಾದ ಆನಂದ ಶಿಂಗಾಡಿ, ಶರೀಫ ಬಿಳೆಯಲಿ, ಮುತ್ತು ಬಿಳೆಯಲಿ, ಮಂಜುನಾಥ ಗೊಂದಿಯವರ, ಅನಿಲ ಕಾಳೆ, ರವಿ ಚಲವಾದಿ, ಪರಶು ಕಾಳೆ, ಶಿವಾನಂದ ತಮ್ಮಣ್ಣವರ, ಸುರೇಶ ಕಡ್ಲಿಮಟ್ಟಿ, ಕುಮಾರ ಕಳಸಾಪುರ ಹಾಗೂ ರವಿ ಕಾಳೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಲಕ್ಷ್ಮೇಶ್ವರದಲ್ಲಿ ಅಕ್ಕಮಹಾದೇವಿ ಜಯಂತಿ ಆಚರಣೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪುರಸಭೆ ಕಾರ್ಯಾಲಯದಲ್ಲಿ ಗುರುವಾರ ಅಕ್ಕಮಹಾದೇವಿ ಜಯಂತಿಯನ್ನು ಆಚರಿಸಲಾಯಿತು. ಈ ಅಂಗವಾಗಿ ಅಕ್ಕಮಹಾದೇವಿಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪನಮನಗಳನ್ನು ಅರ್ಪಿಸಲಾಯಿತು.

ಈ ಸಂದರ್ಭದಲ್ಲಿ ಪುರಸಭೆ ವ್ಯವಸ್ಥಾಪಕಿ ಮಂಜುಳಾ ಹೂಗಾರ ಹಾಗೂ ಹನುಮಂತಪ್ಪ ನಂದೆಣ್ಣವರ ಮಾತನಾಡಿ, ಅಕ್ಕಮಹಾದೇವಿ ಮಹಿಳೆಯರ ಬದುಕಿಗೆ ಆದರ್ಶ ವ್ಯಕ್ತಿಯಾಗಿದ್ದಾರೆ ಎಂದು ಹೇಳಿದರು. 12ನೇ ಶತಮಾನದ ಪ್ರಮುಖ ವಚನಕಾರರಲ್ಲಿ ಒಬ್ಬರಾದ ಅವರು, ಅಧಿಕಾರ, ಸಂಪತ್ತು ಮತ್ತು ವೈಭವವನ್ನು ತ್ಯಜಿಸಿ ಸರಳ ಜೀವನ ನಡೆಸಿ, ವಚನಗಳ ಮೂಲಕ ಬದುಕಿನ ಮೌಲ್ಯಗಳನ್ನು ಸಾರಿದರು ಎಂದು ವಿವರಿಸಿದರು.

ಪುರುಷ ಪ್ರಧಾನ ಸಮಾಜದಲ್ಲಿ ಮಹಿಳೆಯರು ಎದುರಿಸುವ ಆಧ್ಯಾತ್ಮಿಕ ಸವಾಲುಗಳಿಗೆ ಅಕ್ಕಮಹಾದೇವಿ ಮಾರ್ಗದರ್ಶನ ನೀಡಿದ ಮಹಾನ್ ಚಿಂತಕಿ. ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು.

ಈ ಸಂದರ್ಭದಲ್ಲಿ ಕಂದಾಯ ಅಧಿಕಾರಿ ಸುರೇಶ ಪೂಜಾರ, ಕಂದಾಯ ನಿರೀಕ್ಷಕ ವೆಂಕಟೇಶ ರಾಮಗೇರಿ, ನೇತ್ರಾ ಹೊಸಮನಿ, ಇಂಜಿನಿಯರ್ ಈರಣ್ಣ ದುರಗಣ್ಣವರ, ಲಿಂಬಯ್ಯನಮಠ, ಉಮಾ ಬೆಳವಿಗಿ, ಮಂಜುನಾಥ ಹೆಬ್ಬಾಳ, ಮಹೇಶ ಹೊಸಮನಿ, ಲಲಿತಾ ಶೆಳಕೆ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಕೃಷ್ಣ ಕುಲಕರ್ಣಿ, ಗಂಗಾಧರ ಅರಳಿ, ಸುರೇಶ ಹಟ್ಟಿ, ಶಂಕರ ಬ್ಯಾಡಗಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

ಪಟ್ಟಣದ ಅಕ್ಕಮಹಾದೇವಿ ದೇವಸ್ಥಾನದಲ್ಲಿಯೂ ಜಯಂತಿ ಅಂಗವಾಗಿ ತೊಟ್ಟಿಲೋತ್ಸವ ಕಾರ್ಯಕ್ರಮವನ್ನು ವಿಜೃಂಭಣೆಯಿಂದ ನೆರವೇರಿಸಲಾಯಿತು. ನಿರ್ಮಲಾ ಅರಳಿ, ಅಶ್ವಿನಿ ಅಂಕಲಕೋಟಿ, ರತ್ನಾ ಕರ್ಕಿ, ಅನ್ನಪೂರ್ಣ ಓದುನವರ, ಸುಲೋಚನಾ ಜವಾಯಿ ಸೇರಿದಂತೆ ಅನೇಕ ಮಹಿಳೆಯರು ಭಾಗವಹಿಸಿದ್ದರು.

ವಿದ್ಯಾರ್ಥಿ ಒಕ್ಕೂಟ ಉದ್ಘಾಟನೆ, ಬಿ.ಇಡ್ ಪ್ರಶಿಕ್ಷಣಾರ್ಥಿಗಳಿಗೆ ಸ್ವಾಗತ ಸಮಾರಂಭ

# ಭಾವಿ ಶಿಕ್ಷಕರು ಮೌಲ್ಯಾಧಾರಿತ ಶಿಕ್ಷಣಕ್ಕೆ ಸಿದ್ಧರಾಗಬೇಕು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಚನ್ನಮ್ಮ ಶೈಕ್ಷಣಿಕ ಹಾಗೂ ವಿವಿಧೋದ್ದೇಶಗಳ ಸಮಿತಿ (ರಿ) ಶ್ರೀ ಸಹಸ್ರಾರ್ಜುನ ಶಿಕ್ಷಣ ಮಹಾವಿದ್ಯಾಲಯದಲ್ಲಿ 2025-26ನೇ ಶೈಕ್ಷಣಿಕ ವರ್ಷದ ವಿದ್ಯಾರ್ಥಿ ಒಕ್ಕೂಟದ ಉದ್ಘಾಟನೆ ಹಾಗೂ ಬಿ.ಇಡ್ ಪ್ರಥಮ ವರ್ಷದ ಪ್ರಶಿಕ್ಷಣಾರ್ಥಿಗಳಿಗೆ ಸ್ವಾಗತ ಸಮಾರಂಭವನ್ನು ಆಯೋಜಿಸಲಾಗಿತ್ತು.

> "ಶಿಕ್ಷಕರು ಜ್ಞಾನ ಜೊತೆಗೆ ಮೌಲ್ಯಗಳನ್ನು ಹಂಚುವ ಶಿಲ್ಪಿಗಳು; ಅವರ ಪಾತ್ರ ದೇಶದ ಭವಿಷ್ಯ ನಿರ್ಧರಿಸುತ್ತದೆ."
> – **ನಿಜಲಿಂಗಪ್ಪ ಮಟ್ಟಿಹಾಳ,** ಕುಲ ಸಚಿವ, ಮೌಲ್ಯಮಾಪನ ವಿಭಾಗ,

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕರ್ನಾಟಕ ವಿಶ್ವವಿದ್ಯಾಲಯದ ಮೌಲ್ಯಮಾಪನ ವಿಭಾಗದ ಕುಲಸಚಿವ ನಿಜಲಿಂಗಪ್ಪ ವಾಯ್ ಮಟ್ಟಿಹಾಳ ಮಾತನಾಡಿ, ದೇಶದ ಭವಿಷ್ಯವನ್ನು ರೂಪಿಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ. ಆದ್ದರಿಂದ ಭಾವಿ ಶಿಕ್ಷಕರು ಜ್ಞಾನಾರ್ಜನೆಯ ಜೊತೆಗೆ ಬೋಧನಾ ಕೌಶಲ್ಯ, ಅಧ್ಯಯನಶೀಲತೆ ಹಾಗೂ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಪ್ರಸ್ತುತ ಶಿಕ್ಷಣ ಕ್ಷೇತ್ರದಲ್ಲಿ ಸ್ಪರ್ಧಾತ್ಮಕ ವಾತಾವರಣ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಶಿಕ್ಷಕರು ಹೊಸ ಬೋಧನಾ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳಬೇಕು. ಮಕ್ಕಳ ಮನೋವಿಜ್ಞಾನವನ್ನು ಅರ್ಥಮಾಡಿಕೊಂಡು ಅವರಿಗೆ ಆಸಕ್ತಿ ಮೂಡಿಸುವ ರೀತಿಯಲ್ಲಿ ಬೋಧನೆ ನಡೆಸುವುದು ಅಗತ್ಯ ಎಂದು ಅವರು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಅಧ್ಯಕ್ಷೆ ಗೀತಾ ವಿ. ಖೋಡೆ ಮಾತನಾಡಿ, ಮಕ್ಕಳು ಅನುಕರಣೆಯ ಮೂಲಕ ಕಲಿಯುವುದರಿಂದ ಶಿಕ್ಷಕರು ಸದಾ ಆದರ್ಶ ವ್ಯಕ್ತಿತ್ವವನ್ನು ಹೊಂದಿರಬೇಕು ಎಂದರು. ಶಿಕ್ಷಕರಾಗಿ ಸಮಾಜ, ಕುಟುಂಬ ಹಾಗೂ ಗುರುಗಳ ಋಣವನ್ನು ತೀರಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕ.ರಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನಿಕಟಪೂರ್ವ ಅಧ್ಯಕ್ಷ ವಸಂತಸಾ ಖೋಡೆ, ಎಸ್.ಆರ್. ಬಾಕಳೆ, ಕೆ.ಜಿ. ಖೋಡೆ, ಎಂ.ಕೆ. ಹೊಸಮಠ, ಪರಶುರಾಮಸಾ ಬದಿ, ಬಿ.ಕೆ. ಖಠಾರೆ, ಎಂ. ಸಿದ್ದಲಿಂಗಯ್ಯ, ಜಿ.ಎಸ್. ಖೋಡೆ, ವಿ.ಎಂ. ಪೂಜಾರಿ, ಎಂ.ಡಿ. ಶಿದ್ಲಿಂಗ ಸೇರಿದಂತೆ ಉಪನ್ಯಾಸಕ ವೃಂದ ಹಾಗೂ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

ಪ್ರಾಚಾರ್ಯ ಆರ್.ಎಂ. ಅಂಗಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಶಿಕ್ಷಣಾರ್ಥಿಗಳಾದ ಎಂ.ಎ. ಅತ್ತಾರ ಹಾಗೂ ಭವ್ಯಶ್ರೀ ಜಿ.ಎಸ್ ಕಾರ್ಯಕ್ರಮ ನಿರೂಪಿಸಿದರು.


2026-27 ಬಜೆಟ್‌ನಲ್ಲಿ 4,790 ಕೋಟಿ ಮೀಸಲು; ಶಿಕ್ಷಣ, ಉದ್ಯೋಗ, ಮಹಿಳಾ ಸಬಲೀಕರಣಕ್ಕೆ ಒತ್ತು-ಅಶೋಕ ಮಂದಾಲಿ

# ಅಲ್ಪಸಂಖ್ಯಾತರ ಅಭಿವೃದ್ಧಿಗೆ ಕಾಂಗ್ರೆಸ್ ಬದ್ಧ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕದ 2026-27ನೇ ಸಾಲಿನ ಬಜೆಟ್‌ನಲ್ಲಿ ಅಲ್ಪಸಂಖ್ಯಾತ ಸಮುದಾಯಗಳ ಅಭಿವೃದ್ಧಿಗೆ 4,790 ಕೋಟಿ ಅನುದಾನ ಮೀಸಲಿಟ್ಟಿರುವುದು ಸರ್ಕಾರದ ಬದ್ಧತೆಯನ್ನು ತೋರಿಸುತ್ತದೆ ಎಂದು ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಹಾಗೂ ಗದಗ ತಾಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ



ಹಾಗೂ ಸಿಖ್ ಸಮುದಾಯಗಳ ಸಬಲೀಕರಣಕ್ಕೆ ವಿಶೇಷ ಆದ್ಯತೆ ನೀಡಲಾಗಿದೆ ಎಂದು ಹೇಳಿದರು. ಹಿಂದಿನ ಅವಧಿಗಳಲ್ಲಿ ಅನುದಾನ ಕಡಿಮೆಯಾಗಿದ್ದರೆ, ಇದೀಗ ಸಮಗ್ರ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗಿದೆ ಎಂದು ತಿಳಿಸಿದರು.

ಹೊಸ ಬಜೆಟ್‌ನಲ್ಲಿ ಜೈನ್, ಬೌದ್ಧ ಮತ್ತು ಸಿಖ್ ಸಮುದಾಯಗಳ ಅಭಿವೃದ್ಧಿಗೆ ಪ್ರತ್ಯೇಕ ಅನುದಾನ, ಉದ್ಯೋಗಸ್ಥ ಮಹಿಳೆಯರಿಗಾಗಿ ವಸತಿ ನಿಲಯಗಳು, ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷಾ ಮಾರ್ಗದರ್ಶನ, ಹೊಸ ವಿದ್ಯಾರ್ಥಿ ನಿಲಯಗಳ ಸ್ಥಾಪನೆ ಸೇರಿದಂತೆ ಹಲವು ಯೋಜನೆಗಳನ್ನು ಜಾರಿಗೆ ತರಲಾಗಿದೆ. ಜೊತೆಗೆ ಅಲ್ಪಸಂಖ್ಯಾತ ಯುವಕರಿಗೆ ಸ್ವಯಂ ಉದ್ಯೋಗ ತರಬೇತಿ

> "ಅಲ್ಪಸಂಖ್ಯಾತ ಸಮುದಾಯಗಳ ಸಮಗ್ರ ಅಭಿವೃದ್ಧಿಗೆ ಈ ಬಜೆಟ್ ನೂತನ ಮೈಲುಗಲ್ಲು."
> – **ಅಶೋಕ ಮಂದಾಲಿ,** ಪ್ರಚಾರ ಸಮಿತಿ ಜಿಲ್ಲಾ ಅಧ್ಯಕ್ಷ.

ಹಾಗೂ ಕುಟುಂಬಗಳಿಗೆ ಆರ್ಥಿಕ ನೆರವು ನೀಡುವ ಯೋಜನೆಗಳೂ ಒಳಗೊಂಡಿವೆ ಎಂದು ವಿವರಿಸಿದರು.

ಇದಕ್ಕೂ ಮೊದಲಿನ ವರ್ಷಗಳಲ್ಲಿ ಶಿಕ್ಷಣ, ಮಹಿಳಾ ಸಬಲೀಕರಣ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಸಂಬಂಧಿಸಿದಂತೆ ಹಲವು ಕಾರ್ಯಕ್ರಮಗಳನ್ನು ಜಾರಿಗೆ ತಂದಿರುವುದರಿಂದ ಅಲ್ಪಸಂಖ್ಯಾತ ಸಮುದಾಯಗಳಿಗೆ ಉತ್ತಮ ಅವಕಾಶಗಳು ಸಿಕ್ಕಿವೆ ಎಂದು ಹೇಳಿದರು. ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ, ಮಹಿಳೆಯರಿಗೆ ಸಬಲೀಕರಣ, ಉದ್ಯಮಶೀಲತೆಗೆ ಉತ್ತೇಜನ ಹಾಗೂ ಧಾರ್ಮಿಕ ಮತ್ತು ಸಾಮಾಜಿಕ ಮೂಲಸೌಕರ್ಯ ಅಭಿವೃದ್ಧಿಗೆ ಈ ಬಜೆಟ್ ಪೂರಕವಾಗಿದೆ ಎಂದು ಅಭಿಪ್ರಾಯಪಟ್ಟರು.

# ಎ. 9ರಿಂದ ಬೃಹತ್ ಉದ್ಯೋಗ ಮೇಳ

▶▶ಮೊದಲನೇ ಪುಟದಿಂದ

ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಪಟ್ಟಣದ ಬಾಸಲಾಪೂರ ರಸ್ತೆಯಲ್ಲಿರುವ ಪುರಸಭೆ ಜಮೀನಿನಲ್ಲಿ ಕಾರ್ಮಿಕರ ಮಕ್ಕಳಿಗಾಗಿ 38 ಕೋಟಿ ರೂ ವೆಚ್ಚದ ವಸತಿ ನಿಲಯ ಕಾಮಗಾರಿಗೆ ಚಾಲನೆ ನೀಡಲಾಗುತ್ತದೆ. ಜೊತೆ-ಗೆ ಜಿಗಳೂರ ಕೆರೆಯ ತಟದಲ್ಲಿ ನಿರ್ಮಿಸಲಾದ ಸಾಲು ಮರದ ತಿಮ್ಮಕ್ಕ ವೃಕ್ಷೋದ್ಯಾನವನ ಹಾಗೂ 2 ಕೋಟಿ ರೂ ವೆಚ್ಚದ ಈಜುಕೊಳವನ್ನು ಸಾರ್ವಜನಿಕ ಬಳಕೆಗೆ ಉದ್ಘಾಟಿಸಲಾಗುತ್ತದೆ ಎಂದು ತಿಳಿಸಿದರು.

ಈ ಕಾರ್ಯಕ್ರಮಗಳಲ್ಲಿ ಸಚಿವರಾದ ಸಂತೋಷ ಲಾಡ್ ಮತ್ತು ಡಾ. ಹೆಚ್.ಕೆ. ಪಾಟೀಲ ಭಾಗವಹಿಸಲಿದ್ದಾರೆ. ಸಾರ್ವಜನಿಕರು ಈ ಸೌಲಭ್ಯಗಳನ್ನು ಕಾಪಾಡಿಕೊಂಡು, ಪ್ರವಾಸಿ ತಾಣಗಳ ಅಭಿವೃದ್ಧಿಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಐ.ಎಸ್. ಪಾಟೀಲ, ಅಕ್ಷಯ ಪಾಟೀಲ, ಶಶಿಕಲಾ ಪಾಟೀಲ, ವಿ.ಬಿ. ಸೋಮನಕಟ್ಟಿಮಠ, ಅಪ್ಪು ಗಿರಡ್ಡಿ, ಆನಂದ ಚಂಗಳಿ, ಸಂಗು ನವಲಗುಂದ, ನಾಗರಾಜ ಪಲ್ಲೇದ, ಸೋಮು ನಾಗರಾಜ, ಮಲೀಕ ಯಲಿಗಾರ, ಅಸ್ಲಂ ಕೊಪ್ಪಳ, ಡಾ.ಐ.ಬಿ. ಕೊಟ್ಟೂರಶೆಟ್ಟರ ಸೇರಿದಂತೆ ಹಲವರು ಉಪಸ್ಥಿತರಿದ್ದರು.





ಲಕ್ಷ್ಮೇಶ್ವರ: ಬಿಜೆಪಿ ಪಕ್ಷದ ಲಕ್ಷ್ಮೇಶ್ವರ ನಗರ ಘಟಕದ ಅಧ್ಯಕ್ಷರಾಗಿ ವಿಜಯಕುಮಾರ ಎಂ. ಕುಂಬಾರ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಪ್ರವೀಣ ಕೆ. ಬೋಮಲೆ ಅವರನ್ನು ಬಿಜೆಪಿ ಶಿರಹಟ್ಟಿ ಮಂಡಳದ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka